ಭಾನುವಾರ 11.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 117
Digital Varthe Kannada Daily
Volume 01 - Issue 117
Sunday 11.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ಕೌಟುಂಬಿಕ ಕಲಹ 10 ತಿಂಗಳ ಮಗುವಿಗೆ ವಿಷವುಣಿಸಿ ಆತ್ಮಹತ್ಯೆಗೆ ಶರಣಾದ ತಾಯಿ

**ಹೈದರಾಬಾದ್:** ಕೌಟುಂಬಿಕ ಕಲಹದಿಂದ ಬೇಸತ್ತು 27 ವರ್ಷದ ಮಹಿಳೆಯೊಬ್ಬಳು ತನ್ನ 10 ತಿಂಗಳ ಮಗನಿಗೆ ವಿಷವುಣಿಸಿ ತಾನೂ ಆತ್ಮಹತ್ಯೆಗೆ ಶರಣಾದ ಘಟನೆ ಹೈದರಾಬಾದ್‌ನಲ್ಲಿ ನಡೆದಿದೆ. ತಾಯಿ ಮತ್ತು ಮಗು ಸತ್ತಿರುವುದನ್ನು ನೋಡಿ ಮಗುವಿನ ಅಜ್ಜಿ ಕೂಡ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಆತ್ಮಹತ್ಯೆಗೆ ಶರಣಾದ ಮಹಿಳೆಯನ್ನು ಸುಷ್ಮಾ (27) ಎಂದು ಗುರುತಿಸಲಾಗಿದೆ.



ಸುಷ್ಮಾ ನಾಲ್ಕು ವರ್ಷಗಳ ಹಿಂದೆ ಚಾರ್ಟರ್ಡ್ ಅಕೌಂಟೆಂಟ್ ಆಗಿದ್ದ ಯಶವಂತ್ ರೆಡ್ಡಿ ಎಂಬುವರನ್ನು ವಿವಾಹವಾಗಿದ್ದರು. ಇತ್ತೀಚಿನ ದಿನಗಳಲ್ಲಿ ದಂಪತಿ ಆಗಾಗ ಜಗಳವಾಡುತ್ತಿದ್ದರು ಎಂದು ಕುಟುಂಬದ ಸದಸ್ಯರು ಪೊಲೀಸರಿಗೆ ತಿಳಿಸಿದ್ದಾರೆ. ಸುಷ್ಮಾ ಕಾರ್ಯ ಕ್ರಮವೊಂದಕ್ಕೆ ಸಂಬಂಧಿಸಿದಂತೆ ಶಾಪಿಂಗ್‌ಗಾಗಿ ತನ್ನ ತಾಯಿ ಲಲಿತಾ (44) ಅವರ ಮನೆಗೆ ಹೋಗಿದ್ದರು. ಈ ವೇಳೆ ತನ್ನ ಮಗುವಿನೊಂದಿಗೆ ಮತ್ತೊಂದು ಕೋಣೆಗೆ ಹೋಗಿ, ಮಗುವಿಗೆ ವಿಷ ನೀಡಿ, ನಂತರ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

ಪತಿ ಕೆಲಸ ಮುಗಿಸಿ ವಾಪಸ್ ಮನೆಗೆ ಬಂದು ರೂಮ್ ಒಳಗಿನಿಂದ ಲಾಕ್ ಆಗಿರುವುದನ್ನು ಕಂಡು, ಬಾಗಿಲು ಒಡೆದು ನೋಡಿದ್ದಾರೆ. ಈ ವೇಳೆ ಹೆಂಡತಿ ಮತ್ತು ಮಗ ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿರುವುದು ಗೊತ್ತಾಗಿದೆ. ತಕ್ಷಣ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು. ವೈದ್ಯರು ಇಬ್ಬರು ಮೃತಪಟ್ಟಿದ್ದಾರೆ ಎಂದು ಈ ವೇಳೆ ತಿಳಿಸಿದ್ದಾರೆ.

ತನ್ನ ಮಗಳು ಮತ್ತು ಮೊಮ್ಮಗ ಸತ್ತಿರುವುದನ್ನು ನೋಡಿದ ಲಲಿತಾ ಆಘಾತವನ್ನು ಸಹಿಸಲಾರದೆ ಆತ್ಮಹತ್ಯೆಗೆ ಯತ್ನಿಸಿದ್ದಾರೆ ಎನ್ನಲಾಗಿದೆ. ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

## ಬೆಂಕಿಯ ಕಿನ್ನಾಲೆಗೆ ಹುಲ್ಲಿನ ಮೆದೆ ಭಸ್ಮ

**ಮಂಡ್ಯ:** ಜಾನುವಾರುಗಳ ಮೇವಿಗಾಗಿ ಸಂಗ್ರಹಿಸಿದ್ದ ಭತ್ತದ ಒಣ ಹುಲ್ಲಿನ ಮೆದೆಗೆ ಬೆಂಕಿ ತಗುಲಿದ ಪರಿಣಾಮ ಇಡೀ ಮೆದೆ ಸುಟ್ಟು ಭಸ್ಮವಾಗಿರುವ ಘಟನೆ ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲೂಕಿನ ಅಕ್ಕಿಹೆಬ್ಬಾಳು ಗ್ರಾಮದಲ್ಲಿ ನಡೆದಿದೆ. ಅಕ್ಕಿಹೆಬ್ಬಾಳು ಗ್ರಾಮದ ಶ್ರೀನಿವಾಸ್ ಎಂಬುವವರು ಜಾನುವಾರುಗಳಿಗೆ ಮೇವು ಸಂಗ್ರಹ ಮಾಡಲು 1 ಲಕ್ಷ ರೂಪಾಯಿ ನೀಡಿ ಭತ್ತದ ಒಣ ಹುಲ್ಲನ್ನು ಖರೀದಿ ಮಾಡಿದ್ದರು.

ಬಳಿಕ ಆ ಹುಲ್ಲನ್ನ ಮನೆಯ ಸಮೀಪ ಮೆದೆ ನಿರ್ಮಾಣ ಮಾಡಿ ಸಂಗ್ರಹಿಸಿದ್ದರು. ಕಳೆದ ರಾತ್ರಿ ಇದ್ದಕ್ಕಿದ್ದಂತೆ ಹುಲ್ಲಿನ ಮೆದೆಗೆ ಬೆಂಕಿ ಬಿದ್ದಿದೆ. ಕ್ಷಣಾರ್ಧದಲ್ಲಿ ಬೆಂಕಿಯ ಕಿನ್ನಾಲೆಗೆ ಇಡೀ ಹುಲ್ಲಿನ ಮೆದೆ ಸುಟ್ಟು ಕರಕಲಾಗಿದೆ. ಬಳಿಕ ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಬಂದರು ಸಹ ಯಾವುದೇ ಪ್ರಯೋಜನವಾಗಿಲ್ಲ. ಕೆ.ಆರ್.ಪೇಟೆ ಪಟ್ಟಣ ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ಪ್ರಕರಣ ದಾಖಲಾಗಿದೆ.



ಬೆಂಕಿಗೆ ಆಹುತಿಯಾದ ಗೊಡೌನ್ ಮತ್ತೊಂದು ಪ್ರಕರಣದಲ್ಲಿ ಗೊಡೌನ್‌ವೊಂದಕ್ಕೆ ಬೆಂಕಿ ತಗುಲಿದ ಪರಿಣಾಮ ಇಡೀ ಗೋಡೌನ್ ಸುಟ್ಟು ಭಸ್ಮವಾಗಿದ್ದು, ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ನಾಶವಾಗಿರುವ ಘಟನೆ ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಕಿರುಗಾವಲಿನಲ್ಲಿ ಜರುಗಿದೆ. ಕಿರುಗಾವಲಿನ ಮುಜಾಯಿದ್ ಎಂಬುವವರಿಗೆ ಸೇರಿದ ಪ್ಲಾಸ್ಟಿಕ್ ಸಾಮಗ್ರಿಗಳನ್ನ ದಾಸ್ತಾನು ಮಾಡಿದ್ದ ಗೋಡೌನ್ ಬೆಂಕಿಗೆ ಆಹುತಿಯಾಗಿದೆ. ಕಳೆದ ತಡ ರಾತ್ರಿ ಗೋಡೌನ್‌ನಲ್ಲಿ ಇದ್ದಕ್ಕಿದ್ದಂತೆ ಬೆಂಕಿ ಕಾಣಿಸಿಕೊಂಡಿದ್ದು, ಕ್ಷಣಾರ್ಧದಲ್ಲೇ ಸಂಪೂರ್ಣವಾಗಿ ಗೋಡೌನ್ ಸುಟ್ಟು ಕರಕಲಾಗಿದೆ. ಶಾರ್ಟ್ ಸರ್ಕ್ಯೂಟ್‌ನಿಂದ ಈ ಅವಘಡ ಜರುಗಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಈ ಘಟನೆಯಿಂದ ಗೊಡೌನ್ ಮಾಲೀಕರಿಗೆ ಲಕ್ಷಾಂತರ ರೂಪಾಯಿ ನಷ್ಟವಾಗಿದ್ದು, ಕಿರುಗಾವಲು ಪೊಲೀಸ್ ಠಾಣೆಯಲ್ಲಿ ಪ್ರಕಾರ ದಾಖಲಾಗಿದೆ.

## ಮದುವೆ ಭರವಸೆ, ಮಗು ಜನನ; 36 ಲಕ್ಷ ಪಡೆದು ಮೋಹನ್ ಪರಾರಿ

**ಬೆಂಗಳೂರು:** ವಿಚ್ಛೇದಿತ ಮಹಿಳೆಯನ್ನ ಬಣ್ಣದ ಮಾತುಗಳಿಂದ ಯಾಮಾರಿಸಿ ಬಾಳು ಕೊಡೋದಾಗಿ ಮದುವೆಯಾಗಿದ್ದ ಮೋಹನ್ ರಾಜ್ ಎಂಬಾತನ ವಿರುದ್ಧ ವಂಚನೆ ಪ್ರಕರಣ ದಾಖಲಾಗಿದೆ. ಚಿನ್ನಾಭರಣ ಸೇರಿ ಒಟ್ಟು 36 ಲಕ್ಷ ರೂ. ವಂಚನೆ ಮಾಡಿರುವ ಆರೋಪದ ಮೇಲೆ ಬನಶಂಕರಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಹೌದು.. ಮೋಹನ್ ರಾಜ್ ಎಂಬಾತ ಮಹಿಳೆಗೆ ಬಾಳು ಕೊಡೋದಾಗಿ ಮದ್ವೆ ಆಗಿದ್ದ. ಮಗು ಕೂಡ ಆಗಿತ್ತು. ಆ ಬಳಿಕ ಹೊಸ ಮನೆ ಕಟ್ಟಿ ಹೊಸ ಜೀವನ ಶುರು ಮಾಡೋಣ ಅಂತಿದ್ದ ಮೋಹನ ಮಹಿಳೆಯಿಂದ ಹಣ ಪೀಕಿದ್ದ. ಚಿನ್ನಾಭರಣ ಸೇರಿ 36 ಲಕ್ಷ ಹಣ ಪಡೆದು ಎಸ್ಕೇಪ್ ಆಗಿದ್ದಾನೆ. ಇದೀಗ ನ್ಯಾಯಕ್ಕಾಗಿ ಮಹಿಳೆ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾಳೆ. ಮೋಹನ್ ರಾಜ್ ಹಾಗೂ ಮಹಿಳೆ ಒಂದೇ ಏರಿಯಾದವರು. ಬನಶಂಕರಿಯಲ್ಲಿ ನೆಲೆಸಿದ್ದ ಮೋಹನ್‌ಗೆ ಮಹಿಳೆ ಡಿವೋರ್ಸ್ ಕಥೆ ಗೊತ್ತಾಗಿದೆ. ಆಕೆಗೆ ಹಲವು ವರ್ಷಗಳಿಂದ ಪರಿಚಿತನಾಗಿದ್ದ ಈತ, ಇಬ್ಬರು ಮದುವೆಯಾಗೋಣ ಹೊಸ ಜೀವನ ನಡೆಸೋಣ ಅಂತ ಮಾತು ಕೊಟ್ಟು ತಾಳಿಕಟ್ಟಿದ್ದಾನೆ. ಬಳಿಕ ತನ್ನ ವರಸೆಯನ್ನೇ ಬದಲಿಸಿದ್ದಾನೆ. ಹೀಗಾಗಿ ಮಹಿಳೆ ಕಂಗಾಲಾಗಿದ್ದಾಳೆ.



ಮೋಹನ್ ರಾಜ್ ಮತ್ತು ಮಹಿಳೆ 10 ವರ್ಷಗಳಿಂದ ಪರಿಚಿತರು. 2022 ರಲ್ಲಿ ಮಹಿಳೆ ಜೊತೆಗೆ ಮೋಹನ್ ರಾಜ್ ವಿವಾಹ ನಡೆದಿದ್ದು. 2023 ರಲ್ಲಿ ದಂಪತಿಗೆ ಒಂದು ಹೆಣ್ಣು ಮಗು ಕೂಡ ಆಗಿತ್ತು. ಬಳಿಕ 2025 ರಲ್ಲಿ ಮನೆ ಬಿಟ್ಟು ಹೋದವನು ನಾಪತ್ತೆಯಾಗಿದ್ದಾನೆ. ಈ ಪ್ರಕರಣ ಸಂಬಂಧ ಬನಶಂಕರಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ನ್ಯಾಯಕ್ಕಾಗಿ ಅಲೆದಾಡಿದರರೂ ಪೊಲೀಸರಿಂದ ನಿರ್ಲಕ್ಷ್ಯ ಆರೋಪವೂ ಕೇಳಿಬಂದಿದೆ. ಮನೆ ಕಟ್ಟೋಣ ಅಂತ ಹಣ ಕಿತ್ಕೊಂಡು ಮನೆ ಬಿಟ್ಟೋದ

ಹೊಸ ಮನೆ ಕಟ್ಟಿ ಹೊಸ ಜೀವನ ಶುರು ಮಾಡೋಣ ಅಂದಿದ್ದ ಮೋಹನ, ಆಕೆಯಿಂದ ಚಿನ್ನಾಭರಣ ಸೇರಿ 36 ಲಕ್ಷದಷ್ಟು ಹಣ ಪಡೆದಿದ್ದಾನೆ. 2025ರಿಂದ ನಾಪತ್ತೆಯಾಗಿದ್ದಾನೆ. ಬೇರೆ ಬೇರೆ ಯುವತಿಯರ ಜೊತೆಗೂ ಸಂಬಂಧ ಹೊಂದಿದ್ದ ಮೋಹನ್ ರಾಜ್ ಯುವತಿಯರಿಗೆ ಅಸಭ್ಯ ಸಂದೇಶ ಕಳಿಸುತ್ತಿದ್ದ ಅಂತಲೂ ಮಹಿಳೆ ಆರೋಪ ಮಾಡಿದ್ದಾರೆ.

ಈ ಬಗ್ಗೆ ನಾಲ್ಕು ಬಾರಿ ಪೊಲೀಸ್ ಠಾಣೆಗೆ ದೂರು ನೀಡಿದ್ರೂ ನ್ಯಾಯ ಸಿಕ್ಕಿಲ್ಲ. ಒತ್ತಾಯ ಮಾಡಿದ್ರೆ ನಿನ್ನನ್ನೇ ಒಳಗೆ ಹಾಕ್ತೀವಿ ಅಂತ ಪೊಲೀಸ್‌ನವರು ಹೆದರಿಸ್ತಿದ್ದಾರೆ ಅಂತ ಮಹಿಳೆ ಅಲವತ್ತುಕೊಂಡಿದ್ದಾರೆ.

## ಸಂಕ್ರಾಂತಿ ಸುಗ್ಗಿ ಸಂಭ್ರಮ : ಶಾಸಕ ಎಸ್.ಟಿ ಸೋಮಶೇಖರ್ ಚಾಲನೆ



**ಯಶವಂತಪುರ :** ಬಾಂಧವ್ಯ ಗಟ್ಟಿಗೊಳಿಸುವ ಗ್ರಾಮೀಣ ಸೊಗಡಿನ ಸುಗ್ಗಿ ಸಂಕ್ರಾಂತಿಯನ್ನು ಕ್ಷೇತ್ರದಾದ್ಯಂತ ಸಂಭ್ರಮದಿಂದ ಆಚರಿಸಲಾಗುವುದು ಎಂದು ಶಾಸಕ ಎಸ್.ಟಿ ಸೋಮಶೇಖರ್ ತಿಳಿಸಿದರು ಹೇರೋಹಳ್ಳಿ ವಾರ್ಡ್‌ನ ಭಾರತ್ ನಗರದಲ್ಲಿ ಸಂಕ್ರಾಂತಿ ಉತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ರೈತರು ಜಮೀನಿನಲ್ಲಿ ಬೆಳೆದ ದವಸ ಧಾನ್ಯದ ಫಸಲನ್ನು ಪೂಜಿಸಿ ಬಡವರಿಗೆ ಉಡುಗೊರೆಯಾಗಿ ಹಂಚುವುದು ವಾಡಿಕೆ. ಸಮಾಜಮುಖಿ ಈ ಸತ್ಸಂಪ್ರದಾಯವನ್ನು ಮುಂದುವರೆಸುವ ನಿಟ್ಟಿನಲ್ಲಿ ಕ್ಷೇತ್ರದ ಹಲವೆಡೆ "ಸಂಕ್ರಾಂತಿ ಸುಗ್ಗಿ ಸಂಭ್ರಮ 2026" ಆಯೋಜಿಸಲಾಗಿದೆ. ಜತೆಗೆಎಳ್ಳು-ಬೆಲ್ಲ, ಕಬ್ಬು-ಗೆಣಸು, ಕಡಲೆಕಾಯಿ, ಅವರೆಕಾಯಿ

ಒಳಗೊಂಡಿರುವ ಕಿಟ್ ಸಹ ವಿತರಿಸಲಾಗುವುದು. ಕಲಾತಂಡಗಳು ಸುಗ್ಗಿಯ ಸಂಭ್ರಮವನ್ನು ಇಮ್ಮಡಿಗೊಳಿಸಿದರೆ, ಜಾನಪದ ಸಂಗೀತೋತ್ಸವ ಜನರಿಗೆ ರಸದೌತಣ ನೀಡಲಿದೆ ಎಂದರು ಇದೇ ಜ.12ರ ಸೋಮವಾರ ತಾವರೆಕೆರೆಯ ಅತಿಥಿ ಗಾರ್ಡೇನಿಯ ಹೋಟೆಲ್ ಬಳಿಯ ಮೈದಾನದಲ್ಲಿ ಕಾರ್ಯಕ್ರಮ ನಡೆಯಲಿದೆ. ಜ.13ರ ಮಂಗಳವಾರ ತಾತಗುಣಿ ಗ್ರಾಮದಲ್ಲಿ ಹಾಗೂ ಜ.14ರ ಬುಧವಾರದಂದು ಶಾಸಕರ ಕಛೇರಿ ಬಳಿ ಇರುವ ಕೆಂಪೇಗೌಡ ಆಟದ ಮೈದಾನದಲ್ಲಿ ವಿಶೇಷವಾಗಿ ಹಬ್ಬವನ್ನು ಆಚರಿಸಲಾಗುವುದು ಎಂದು ತಿಳಿಸಿದರು.

ಜನತೆ ದ್ವೇಷಾಸೂಯೆ ಮರೆತು ಎಳ್ಳು ಬೆಲ್ಲ ತಿಂದು ಒಳ್ಳೆಯ ಮಾತನಾಡಿ ಸಾಮರಸ್ಯದಿಂದ ಸಹಬಾಳ್ವೆ ನಡೆಸಿ ಸಂಕ್ರಾಂತಿ ಸಂಭ್ರಮದಲ್ಲಿ ಮಿಂದೇಳಿ ಎಂದು ಇದೇ ವೇಳೆ ಹಾರೈಸಿದರು.

ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಟಿ.ಎಲ್ ಕೆಂಪೇಗೌಡ, ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಇ. ದೊಡ್ಡನಾಗಯ್ಯ, ತಾವರೆಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರೇವಣ್ಣಸಿದ್ದಯ್ಯ, ಕಗ್ಗಲಿಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಿಕ್ಕರಾಜು, ಹೇರೋಹಳ್ಳಿ ಬ್ಲಾಕ್ ಕಾಂಗ್ರೆಸ್‌ಅಧ್ಯಕ್ಷ ಶ್ರೀಧರ್, ವಾರ್ಡ್ ಅಧ್ಯಕ್ಷ ಆದಿತ್ಯ ರಮೇಶ್, ಕೆಂಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಸಂದ್ರ ನಾಗರಾಜ್ ಮೊದಲಾದವರಿದ್ದರು

## ಯೂಟ್ಯೂಬ್ ನೋಡಿ ಗರ್ಭಿಣಿಗೆ ಆಪರೇಷನ್: ಹೆರಿಗೆ ವೇಳೆ ತಾಯಿ ಸಾವು



**ನವದೆಹಲಿ:** ಹೊಟ್ಟೆ ನೋವಿನಿಂದ ನರಳುತ್ತಿದ್ದ ಗರ್ಭಿಣಿಗೆ ನಕಲಿ ವೈದ್ಯರೊಬ್ಬರು ಯೂಟ್ಯೂಬ್ ವಿಡಿಯೋ ನೋಡಿಕೊಂಡು ಆಪರೇಷನ್ ಮಾಡಿದ್ದಾರೆ. ಆ ವೈದ್ಯರ ಹುಚ್ಚಾಟದಿಂದಾಗಿ ಮಹಿಳೆ ಸಾವನ್ನಪ್ಪಿದ್ದಾರೆ. ಆದರೆ, ಮಗು ಸದ್ಯಕ್ಕೆ ಸುರಕ್ಷಿತವಾಗಿದೆ. ಬಿಹಾರದ ಭಾಗಲ್ಪುರದಲ್ಲಿ ಈ ಅಮಾನವೀಯ ಘಟನೆ ನಡೆದಿದೆ. ನಕಲಿ ವೈದ್ಯ ಯೂಟ್ಯೂಬ್ ನಲ್ಲಿ ಪೋಸ್ಟ್ ಮಾಡಲಾಗಿದ್ದ ವಿಡಿ ಯೋವನ್ನು ನೋಡಿ ಕೊಂಡು ಹೆರಿಗೆ ನೋವಿನಿಂದ ನರಳುತ್ತಿದ್ದ ಮಹಿಳೆಗೆ ಆಪರೇಷನ್ ಮಾಡಿದ್ದಾರೆ. ಆಪರೇಷನ್ ಸಮಯದಲ್ಲಿ ಮಹಿಳೆ ಸಾವನ್ನಪ್ಪಿದ್ದಾರೆ. ಈ ವಿಷಯ ತಿಳಿಯುತ್ತಿದ್ದಂತೆ ಮಹಿಳೆಯ ಕುಟುಂಬಸ್ಥರು ಹಾಗೂ ಊರಿನವರು ಆಸ್ಪತ್ರೆಗೆ ಮುತ್ತಿಗೆ ಹಾಕಿ ವೈದ್ಯರ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಪೊಲೀಸರು ಸ್ಥಳಕ್ಕೆ ಆಗಮಿಸಿ ಮಹಿಳೆಯ ಶವ ವನ್ನು ಸ್ವಾಧೀನ ಪಡಿಸಿ ಕೊಂಡು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ಮೃತ ಮಹಿಳೆಯನ್ನು ಸ್ವಾತಿ ದೇವಿ ಎಂದು ಗುರುತಿ ಸಲಾಗಿದೆ. ಅವರ ಅತ್ತೆ-ಮಾವ ಜಾರ್ಖಂಡ್‌ನ ಠಾಕೂರ್‌ಗಂಟಿ ಮೋಧಿಯಾದಲ್ಲಿ ವಾಸಿಸುತ್ತಿದ್ದಾರೆ. ಪತಿ ರೋಷನ್ ಸಹಾ ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದಾರೆ. ಗರ್ಭಿಣಿಯಾದ ನಂತರ ಆ ಮಹಿಳೆ ರಸಲ್‌ಪುರದಲ್ಲಿರುವ ತನ್ನ ಹೆತ್ತವರ ಮನೆಯಲ್ಲಿ ವಾಸಿಸುತ್ತಿದ್ದರು. ಅಲ್ಲಿ ಅವರು ಶ್ರೀಮಠ ಸ್ಥಾನದ ಬಳಿಯ ನಕಲಿ ವೈದ್ಯರ ಬಳಿ ಚಿಕಿತ್ಸೆ ಪಡೆಯುತ್ತಿದ್ದರು. ಗುರುವಾರ ರಾತ್ರಿ ಸ್ವಾತಿ ದೇವಿಗೆ ಹಠಾತ್ತನೆ ಹೆರಿಗೆ ನೋವು ಕಾಣಿಸಿಕೊಂಡಿತು. ಕುಟುಂಬವು ತಕ್ಷಣ ಆಕೆಯನ್ನು ಅದೇ ಕ್ಲಿನಿಕ್‌ಗೆ ಕರೆದೊಯ್ದರು. ಆಕೆಯನ್ನು ಪರೀಕ್ಷಿಸಿದ ನಂತರ ವೈದ್ಯರು ತಮ್ಮ ಸಹಾಯಕರೊಂದಿಗೆ ಆಪರೇಷನ್ ಮಾಡಲು ಸಜ್ಜಾದರು. ಆ ಮಹಿಳೆಯ ಕುಟುಂಬದ ಒಪ್ಪಿಗೆಯನ್ನು ಪಡೆದ ನಂತರ ವೈದ್ಯರು ಹೆರಿಗೆಯ ಕಾರ್ಯವಿಧಾನವನ್ನು ಅರ್ಥ ಮಾಡಿಕೊಳ್ಳಲು ಯೂಟ್ಯೂಬ್ ವೀಡಿಯೊವನ್ನು ವೀಕ್ಷಿಸಿದರು. ಬಳಿಕ ಆ ಮೊಬೈಲನ್ನು ಆಪರೇಷನ್ ಮಾಡುವ ಜಾಗದಲ್ಲಿಟ್ಟುಕೊಂಡೇ ಅಗತ್ಯ ವೈದ್ಯಕೀಯ ಸಹಾಯ ವಿಲ್ಲದೆಯೇ ಆಪರೇಷನ್ ಪ್ರಾರಂಭಿಸಿ ದರು. ಈ ವೇಳೆ ಆ ಮಹಿಳೆಗೆ ತೀವ್ರ ರಕ್ತಸ್ರಾವವಾಗಿ ಆಪರೇಷನ್ ನಡೆಯುತ್ತಿದ್ದ ಜಾಗದಲ್ಲೇ ಸಾವನ್ನಪ್ಪಿದರು. ಆದರೂ ಮಗುವನ್ನು ಆಕೆಯ ಹೊಟ್ಟೆಯಿಂದ ಸುರಕ್ಷಿತವಾಗಿ ಹೊರತೆಗೆಯಲಾಯಿತು. ಆದರೆ, ಆಕೆ ಮೃತಪಟ್ಟ ವಿಷಯವನ್ನು ಮುಚ್ಚಿಟ್ಟ ವೈದ್ಯರು ಆಕೆಯ ಸ್ಥಿತಿ ಚೆನ್ನಾಗಿಲ್ಲ, ಅವರನ್ನು ಬೇರೆ ವೈದ್ಯರ ಬಳಿಗೆ ಕರೆದೊಯ್ಯಬೇಕು ಎಂದು ಹೇಳಿದರು. ಬಳಿಕ ಅವರು ಕ್ಲಿನಿಕ್ ಅನ್ನು ಮುಚ್ಚಿ ಆ ಸ್ಥಳದಿಂದ ಓಡಿಹೋದರು. .

## ಅಮ್ಮನ ಎದೆಹಾಲು ಕುಡಿಯುವಾಗ ಮಗು ಸಾವು

**ಕೊಯಮತ್ತೂರು:**ತಮಿಳುನಾಡಿನ ಕೊಯಮತ್ತೂರು ಜಿಲ್ಲೆಯಲ್ಲಿ ತಾಯಿಯ ಎದೆ ಹಾಲು ಕುಡಿದ ಹೆಣ್ಣು ಮಗುವೊಂದು ಕೆಮ್ಮಿನಿಂದಾಗಿ ಉಸಿರುಗಟ್ಟುವಿಕೆಯಿಂದ ಸಾವನ್ನಪ್ಪಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಇದು ಇಡೀ ಕುಟುಂಬಕ್ಕೆ ತೀವ್ರ ದುಃಖ ಉಂಟುಮಾಡಿದೆ. ಮುರಳಿ ಕೊಯ ಮತ್ತೂರು ಜಿಲ್ಲೆಯ ರಾಮನಾಥಪುರಂನವರು. ಅವರು ಕೂಲಿ ಕೆಲಸ ಮಾಡುತ್ತಿದ್ದರು. ಅವರ ಪತ್ನಿ ವರದಲಕ್ಷ್ಮಿ. ಅವರು ಮದುವೆಯಾಗಿ ಒಂದೂವರೆ ವರ್ಷಗಳಾಗಿತ್ತು. 9 ತಿಂಗಳು ತುಂಬಿದ ಗರ್ಭಿಣಿಯಾಗಿದ್ದ ವರದಲಕ್ಷ್ಮಿಗೆ ಹೆರಿಗೆ ನೋವು ಅನುಭವಿಸಿದ್ದರು. ಇದರ ನಂತರ ವರದಲಕ್ಷ್ಮಿ ಅವರನ್ನು ಕೊಯಮತ್ತೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಯಿತು. ಅಲ್ಲಿ ಅವರು ಡಿಸೆಂಬರ್ 20ರಂದು ಹೆಣ್ಣು ಮಗುವಿಗೆ ಜನ್ಮ ನೀಡಿದರು. ಇದಾದ ನಂತರ, ತಾಯಿ ಮತ್ತು ಮಗುವನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಿ ಮನೆಗೆ ಮರಳಿದರು.. ಮಗು ಇದ್ದಕ್ಕಿದ್ದಂತೆ ಅಸ್ವಸ್ಥವಾಯಿತು. ತಕ್ಷಣ, ಮುರಳಿ ಮತ್ತು ಅವರ ಪತ್ನಿ ವರದಲಕ್ಷ್ಮಿ ಮಗುವನ್ನು ಹತ್ತಿರದ ಖಾಸಗಿ ಆಸ್ಪತ್ರೆಗೆ ಕರೆದೊಯ್ದರು. ಅಲ್ಲಿ ಮಗುವಿಗೆ ವೈದ್ಯರು ಚಿಕಿತ್ಸೆ ನೀಡಿದರು. ಆ ನಂತರ, ಮಗು ಬಹಳ ಹೊತ್ತು ಅಳುತ್ತಿದ್ದ ಕಾರಣದಿಂದಾಗಿ ತಾಯಿ ವರದಲಕ್ಷ್ಮಿ ಮಗುವಿಗೆ ಹಾಲು ಕುಡಿಸಿದ್ದಾರೆ. ಆ ಸಮಯದಲ್ಲಿ, ಹಾಲು ಕುಡಿಯುತ್ತಿದ್ದ ಮಗು ಇದ್ದಕ್ಕಿದ್ದಂತೆ ಚಲನರಹಿತವಾಯಿತು.

ಇದನ್ನು ನೋಡಿ ತಾಯಿ ವರದಲಕ್ಷ್ಮಿ ಆಘಾತಕ್ಕೊಳಗಾದರು ಮತ್ತು ವೈದ್ಯರಿಗೆ ತಿಳಿಸಿದರು. ಅವರು ಮಗುವನ್ನು ಪರೀಕ್ಷಿಸಿ ಹೆಚ್ಚಿನ ಚಿಕಿತ್ಸೆಗಾಗಿ ಕೊಯಮತ್ತೂರು ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲು ಸೂಚಿಸಿದರು. ಆ ಮೇಲೆ ವರದಲಕ್ಷ್ಮಿ ಮತ್ತು ಅವರ ಪತಿ ಮುರಳಿ ಮಗುವನ್ನು ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದರು. ಅಲ್ಲಿ ವೈದ್ಯರು ಮಗುವನ್ನು ಪರೀಕ್ಷಿಸಿದಾಗ ಮಗು ಮೃತಪಟ್ಟಿದೆ ಎಂದು ಹೇಳಿದರು. ತಾಯಿ ಮಗುವಿಗೆ ಹಾಲುಣಿಸುತ್ತಿದ್ದಾಗ ಕೆಮ್ಮಿನಿಂದಾಗಿ ಉಸಿರುಗಟ್ಟಿ ಮಗು ಮೃತಪಟ್ಟಿದೆ ಎಂದು ತಿಳಿದುಬಂದಿದೆ. ನಂತರ, ಮಗುವಿನ ಶವವನ್ನು ಮರಣೋತ್ತರ ಪರೀಕ್ಷೆಗೆ ಕೊಂಡೊಯ್ಯಲಾಯಿತು. ತಾಯಿಯ ಹಾಲು ಕುಡಿಯುವಾಗಲೇ ಮಗು ಉಸಿರುಗಟ್ಟಿ ಸಾವನ್ನಪ್ಪಿದ ಘಟನೆ ಆ ಕುಟುಂಬ ಮತ್ತು ಸುತ್ತಲಿನ ಗ್ರಾಮದಲ್ಲಿ ದುಃಖವನ್ನು ಉಂಟುಮಾಡಿದೆ.

## ಪತಿಯ ಕ್ರೌರ್ಯಕ್ಕೆ ಬಲಿಯಾದ ಪತ್ನಿ; ಕುಡುಕ ಗಂಡನಿಂದ ಹತ್ಯೆ



**ಮೈಸೂರು:** ತನ್ನಿಂದ ದೂರವಾಗಿ ತವರು ಮನೆ ಸೇರಿದ್ದ ಪತ್ನಿಯನ್ನು ಪತಿಯೇ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ಕಳಲೆ ಗ್ರಾಮದಲ್ಲಿ ನಡೆದಿದೆ. ಸುಧಾ ಮೃತ ಮಹಿಳೆಯಾಗಿದ್ದು, ಮರದ ತುಂಡಿನಿಂದ ಹೊಡೆದು ಮರ್ಡರ್ ಮಾಡಿರುವ ಆರೋಪಿ ಮಹೆಶ್‌ನನ್ನು ಪೊಲೀಸರು ಬಂಧಿಸಿದ್ದಾರೆ. ತಾಳಿ ಕಟ್ಟಿದ ಪತಿಯೇ ಪತ್ನಿಯನ್ನು ಕೊಲೆ ಮಾಡಿರೋದು ಗ್ರಾಮಸ್ಥರನ್ನು ಬೆಚ್ಚಿಬೀಳಿಸಿದೆ.

**ಘಟನೆ ಏನು?**

13 ವರ್ಷಗಳ ಹಿಂದೆ ಮಲ್ಲಹಳ್ಳಿ ಗ್ರಾಮದ ಮಹೇಶ್ ಜೊತೆ ವಿವಾಹವಾಗಿದ್ದ ಸುಧಾ ಎರಡು ವರ್ಷಗಳ ಹಿಂದೆ ಪತಿಯಿಂದ ದೂರವಾಗಿದ್ದು, ತನ್ನ ತವರಿಗೆ ಬಂದಿದ್ದಳು. ಕಳಲೆ ಗ್ರಾಮದ ದೊಡ್ಡ ಬೀದಿಯಲ್ಲಿ ತಾಯಿ ಮತ್ತು ಮಕ್ಕಳ ಜೊತೆ ಜೀವನ ನಡೆಸಿಕೊಂಡಿದ್ದಳು. ಆದ್ರೆ , ಮನೆಗೆ ಬಾ ಎಂದು ಸುಧಾಳನ್ನು ಮಹೇಶ ಹಲವು ಬಾರಿ ಒತ್ತಾಯಿಸಿದ್ದ. ಕಳೆದ ವಾರವೂ ಮನೆಗೆ ಹಿಂದಿರುಗಿ ಬಾ ಎಂದು ಕೇಳಿಕೊಂಡಿದ್ದ. ಆದರೆ ಸುಧಾ ಇದಕ್ಕೆ ಒಪ್ಪಿರಲಿಲ್ಲ. ಹೀಗಾಗಿ ಕೋಪಗೊಂಡ ಮಹೇಶ ಪತ್ನಿ ಜೊತೆ ಜಗಳ ಆರಂಭಿಸಿದ್ದಾನೆ. ಗಲಾಟೆ ವಿಕೋಪಕ್ಕೆ ಹೋಗಿ ಮರದ ತುಂಡಿನಿಂದ ಸುಧಾಳ ತಲೆ ಭಾಗಕ್ಕೆ ಹಲ್ಲೆ ನಡೆಸಿದ್ದಾನೆ. ಗಂಡ ಹೊಡೆದ ಏಟಿಗೆ ಸುಧಾ ಸ್ಥಳದಲ್ಲೇ ಮೃತಪಟ್ಟಿದ್ದಾಳೆ. ಮದ್ಯವ್ಯಸನಿಯಾಗಿದ್ದ ಮಹೇಶ್

ಆರೋಪಿ ಮಹೇಶ್ ಮದ್ಯಕ್ಕೆ ದಾಸನಾಗಿದ್ದ. ಜೊತೆಗೆ ಇತರ ದುಶ್ಚಟಗಳಿಗೆ ಬಲಿಯಾಗಿ ಹೆಂಡತಿಗೆ ಹಿಂಸೆ ಕೊಡುತ್ತಿದ್ದ. ಇಸ್ಪೀಟ್ ಆಡಿ ವಿಪರೀತವಾಗಿ ಸಾಲ ಕೂಡ ಮಾಡಿಕೊಂಡಿದ್ದ. ಇದೇ ಕಾರಣಕ್ಕೆ ಸುಧಾ ಗಂಡನ ಮನೆ ಬಿಟ್ಟು ತನ್ನಿಬ್ಬರ ಮಕ್ಕಳ ಜೊತೆ ತವರಿಗೆ ಬಂದಿದ್ದಳು ಎನ್ನಲಾಗಿದೆ. ಇನ್ನು ಘಟನೆ ಬಳಿಕ ಎಸ್ಕೇಪ್ ಆಗಿದ್ದ ಮಹೇಶ್‌ನನ್ನು ನಂಜನಗೂಡು ಪೊಲೀಸರು ಬಂಧಿಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ. ಕೊಲೆಗೆ ನಿಖರ ಕಾರಣ ಏನು ಎಂಬ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿ ಸಿಗದ ಕಾರಣ, ಆ ಬಗ್ಗೆ ತನಿಖೆ ನಡೆಯುತ್ತಿದೆ.

## ಪ್ರಪಾತಕ್ಕೆ ಉರುಳಿದ ಬಸ್ 8 ಪ್ರಯಾಣಿಕರು ದುರ್ಮರಣ



**ಶಿಮ್ಲಾ:** ಚಾಲಕನ ನಿಯಂತ್ರಣ ತಪ್ಪಿ ಬಸ್ ಪ್ರಪಾತಕ್ಕೆ ಉರುಳಿದ ಪರಿಣಾಮ 8 ಮಂದಿ ಸಾವನ್ನಪ್ಪಿದ ಘಟನೆ ಹಿಮಾಚಲ ಪ್ರದೇಶದ ಸಿರ್ಮೌರ್ ಜಿಲ್ಲೆಯಲ್ಲಿ ನಡೆದಿದೆ. ಬಸ್‌ನಲ್ಲಿ 30 ರಿಂದ 35 ಮಂದಿ ಪ್ರಯಾಣಿಸುತ್ತಿದ್ದರು ಎಂದು ತಿಳಿದು ಬಂದಿದೆ. ಪೊಲೀಸರು ಹಾಗೂ ರಕ್ಷಣಾ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಬಹುತೇಕ ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ವರದಿಯಾಗಿದೆ. ಬಸ್ ಪ್ರಪಾತಕ್ಕೆ ಉರುಳಿದ ಮಾಹಿತಿ ಸಿಗುತ್ತಿದ್ದಂತೆ ಸ್ಥಳೀಯರು ನೆರವಿಗೆ ಧಾವಿಸಿ, ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸಿರ್ಮೌರ್ ಪೊಲೀಸ್ ಎಸ್‌ಪಿ ನಿಶ್ಚಿಂತ್ ಸಿಂಗ್ ನೇಗಿ ಸೇರಿದಂತೆ ಪೊಲೀಸರು ಸ್ಥಳಕ್ಕೆ ಧಾವಿಸಿದ್ದಾರೆ. ಸದ್ಯ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ. ಪ್ರಪಾತದಿಂದ ಗಾಯಾಳುಗಳ ಮೇಲಕ್ಕೆ ತಂದು ಆಸ್ಪತ್ರೆ ದಾಖಲಿಸುವ ಪ್ರಯತ್ನ ನಡೆಯುತ್ತಿದೆ. ಈಗಾಗಲೇ 8 ಮಂದಿ ಮೃತಪಟ್ಟಿದ್ದಾರೆ. ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆ ದಾಖಲಿಸಲಾಗುತ್ತಿದೆ ಎಂದು ನಿಶ್ಚಿಂತ್ ಸಿಂಗ್ ನೇಗಿ ತಿಳಿಸಿದ್ದಾರೆ.

## ಹಿಂದೂ ಯುವಕನ ಹತ್ಯೆ ಪ್ರಕರಣ: ಕ್ರೂರವಾಗಿ ಥಳಿಸಿ ವಿಷಪ್ರಯೋಗ

**ಢಾಕಾ:** ಬಾಂಗ್ಲಾದೇಶದಲ್ಲಿ ಮತ್ತೊಬ್ಬ ಹಿಂದೂ ವ್ಯಕ್ತಿಯನ್ನು ಥಳಿಸಿ, ವಿಷ ಕುಡಿಸಿ ಕೊಲ್ಲಲಾಗಿದೆ. ಗುರುವಾರ ಸುನಾಮಗಂಜ್ ಜಿಲ್ಲೆಯಲ್ಲಿ ಜಾಯ್ ಮಹಾಪಾತ್ರೋ ಎಂಬ ಹಿಂದೂ ಯುವಕನ ಮೇಲೆ ದಾಳಿ ಮಾಡಿದ್ದ ದುಷ್ಕರ್ಮಿಗಳು, ಥಳಿಸಿ ಆತನಿಗೆ ವಿಷ ಕುಡಿಸಿದ್ದರು. ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ಆತ ಸಾವನ್ನಪ್ಪಿದ್ದಾನೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಮಹಾಪಾತ್ರೋ ಕುಟುಂಬಸ್ಥರು, ಸ್ಥಳೀಯರು ಆತನ ಮೇಲೆ ಹಲ್ಲೆ ಮಾಡಿ, ವಿಷಪ್ರಾಶನ ಮಾಡಿದ್ದಾರೆ. ನಂತರ ಆತನನ್ನು ಸಿಲ್ಹೆಟ್ ಎಂಎಜಿ ಉಸ್ಮಾನಿ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಿಸದೇ ತೀವ್ರ ನಿಗಾ ಘಟಕದಲ್ಲಿ ಮಹಾಪಾತ್ರೋ ನಿಧನ ಹೊಂದಿದ್ದಾನೆ ಎಂದು ತಿಳಿಸಿದ್ದಾರೆ. ಪ್ರಕರಣದ ಕುರಿತು ಹೆಚ್ಚಿನ ವಿವರಗಳು ಇನ್ನಷ್ಟೇ ತಿಳಿದು ಬರಬೇಕಿದೆ. 2024ರ ದಂಗೆಯಾಗಿ ಶೇಖ್ ಹಸೀನಾ ಸರ್ಕಾರ ಪತನಗೊಂಡ ಬಳಿಕ ಬಾಂಗ್ಲಾದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರನ್ನು ಗುರಿಯಾಗಿಸಿಕೊಂಡು ಹಿಂಸಾಚಾರ ಹೆಚ್ಚಾಗುತ್ತಿದೆ. ಇತ್ತೀಚೆಗೆ ಧರ್ಮನಿಂದೆಯ ಆರೋಪದ ಮೇಲೆ ದೀಪು ಚಂದ್ರ ದಾಸ್ ಎಂಬವರನ್ನು ಹತ್ಯೆ ಮಾಡಲಾಗಿತ್ತು. ಪೊಲೀಸರು ಹತ್ಯೆ ಆರೋಪಿಗಳನ್ನು ಬಂಧಿಸಿದ್ದಾರೆ. ದುಷ್ಕರ್ಮಿಗಳ ಗುಂಪು ಆತನ ಮೇಲೆ ಹಲ್ಲೆ ಮಾಡಿ ಕೊಂದು, ಅವನ ಮೃತದೇಹವನ್ನು ಮರಕ್ಕೆ ನೇತುಹಾಕಿ, ಬೆಂಕಿ ಹಚ್ಚಿತ್ತು. ಅವನ ಹಲವಾರು ಸಹೋದ್ಯೋಗಿಗಳು ಹಲ್ಲೆಯಲ್ಲಿ ಭಾಗಿಯಾಗಿದ್ದರು ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಡಿಕೆಶಿಗೆ ಅಸ್ಸಾಂ ಜವಾಬ್ದಾರಿ: ಸಿಎಂ ಪಟ್ಟದ ಆಸೆಗೆ ತಾತ್ಕಾಲಿಕ ಬ್ರೇಕ್



**ಬೆಂಗಳೂರು:** ಕರ್ನಾಟಕ ರಾಜಕೀಯದಲ್ಲಿ ಸಂಕ್ರಾಂತಿ ಹಬ್ಬದ ಸಂಭ್ರಮದ ನಡುವೆಯೇ ಅಧಿಕಾರ ಹಂಚಿಕೆಯ ಚರ್ಚೆ ಆರಂಭವಾಗುವ ಲಕ್ಷಣಗಳು ದಟ್ಟವಾಗಿದ್ದವು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಎರಡೂವರೆ ವರ್ಷದ ಅವಧಿ ಪೂರ್ಣಗೊಳ್ಳುತ್ತಿರುವ ಬೆನ್ನಲ್ಲೇ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಿಎಂ ಪಟ್ಟದ ಮೇಲೆ ಕಣ್ಣಿಟ್ಟಿದ್ದರು. ಆದರೆ, ದೆಹಲಿಯ ಕಾಂಗ್ರೆಸ್ ಹೈಕಮಾಂಡ್ ಈಗ ಹೊಸ ದಾಳ ಉರುಳಿಸಿದ್ದು, ಕೆಪಿಸಿಸಿ ಅಧ್ಯಕ್ಷರ ಲೆಕ್ಕಾಚಾರವನ್ನು ಬುಡಮೇಲು ಮಾಡಿದಂತಿದೆ. ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆಯ ಗಾಳಿ ಬೀಸಲಿದೆ ಎಂದು ನಿರೀಕ್ಷಿಸಲಾಗಿತ್ತು.

ಆದರೆ ಹೈಕಮಾಂಡ್, ಡಿಕೆಶಿ ಅಸ್ಸಾಂನ ವಿಧಾನಸಭಾ ಚುನಾವಣಾ ವೀಕ್ಷಕರ ಜವಾಬ್ದಾರಿಯನ್ನು ಹೊರಿಸಿದೆ. ಏಪ್ರಿಲ್ ಅಥವಾ ಮೇ ತಿಂಗಳಲ್ಲಿ ಅಸ್ಸಾಂ ಚುನಾವಣೆ ನಡೆಯಲಿದ್ದು, ಅಲ್ಲಿಯವರೆಗೆ ಡಿಕೆಶಿ ತಮ್ಮ ಪೂರ್ಣ ಗಮನವನ್ನು ಅಸ್ಸಾಂನತ್ತ ಹರಿಸಬೇಕಿದೆ. ಇದು ಪರೋಕ್ಷವಾಗಿ ಕರ್ನಾಟಕದಲ್ಲಿ ಸದ್ಯಕ್ಕೆ ಸಿಎಂ ಬದಲಾವಣೆ ಇಲ್ಲ ಎಂಬ ಸಂದೇಶವನ್ನು ರವಾನಿಸಿದಂತಿದೆ.

ಹೈಕಮಾಂಡ್ ಈ ನಡೆಯ ಮೂಲಕ ಒಂದೇ ಕಲ್ಲಿನಲ್ಲಿ ಎರಡು ಹಕ್ಕಿ ಹೊಡೆಯಲು ಮುಂದಾಗಿದೆ, ಮೊದಲನೆಯದಾಗಿ ನಾಯಕತ್ವ ಬದಲಾವಣೆಗೆ ಬ್ರೇಕ್ ಬೀಳಲಿದ್ದು, ಮುಂದಿನ 3-4 ತಿಂಗಳು ಡಿಕೆಶಿ ಅಸ್ಸಾಂನಲ್ಲಿ ಕಾರ್ಯ ನಿರತರಾಗಿರುವುದರಿಂದ ರಾಜ್ಯದಲ್ಲಿ ಸಿಎಂ ಪಟ್ಟದ ಚರ್ಚೆಗೆ ತೆರೆ ಬೀಳಲಿದೆ. ಇದರ ಜೊತೆಗೆ ಈ ಹಿಂದೆ ಮಹಾರಾಷ್ಟ್ರ, ಗೋವಾ ಮತ್ತು ತೆಲಂಗಾಣಗಳಲ್ಲಿ ಡಿಕೆಶಿ ಬೆನ್ನಿಗೆ ಮಿಶ್ರ ಫಲ ಸಿಕ್ಕಿತ್ತು. ಈಗ ಈಶಾನ್ಯ ರಾಜ್ಯದ ಜವಾಬ್ದಾರಿ ನೀಡುವ ಮೂಲಕ ಅವರ ಸಂಘಟನಾ ಶಕ್ತಿಯನ್ನು ಹೈಕಮಾಂಡ್ ಮತ್ತೊಮ್ಮೆ ಪರೀಕ್ಷಿಸುತ್ತಿದೆ.

ಅಸ್ಸಾಂ ಅಭ್ಯರ್ಥಿಗಳ ಸ್ಕ್ರೀನಿಂಗ್ ಕಮಿಟಿಯಲ್ಲಿ ಪ್ರಿಯಾಂಕಾ ಗಾಂಧಿ ವಾದ್ರಾ ಇದ್ದಾರೆ. ಈಗ ಡಿಕೆಶಿ ಅವರು ಪ್ರಿಯಾಂಕಾ ಅವರೊಂದಿಗೆ ಕೆಲಸ ಮಾಡಬೇಕಿದೆ. ಅಸ್ಸಾಂನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅಥವಾ ಉತ್ತಮ ಸಾಧನೆ ಮಾಡಿದರೆ ಮಾತ್ರ ಡಿಕೆಶಿ ಅವರಿಗೆ ಕರ್ನಾಟಕದ ಸಿಎಂ ಸ್ಥಾನಕ್ಕೆ ಹಾದಿ ಸುಗಮವಾಗಲಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಇದರಿಂದಾಗಿ ಡಿಕೆಶಿ ಫುಲ್ ಅಪ್‌ಸೆಟ್ ಆಗಿದ್ದರೂ, ಹೈಕಮಾಂಡ್ ಆದೇಶಕ್ಕೆ ತಲೆಬಾಗಿ ಅಸ್ಸಾಂನತ್ತ ಮುಖ ಮಾಡಿದ್ದಾರೆ.

ಡಿಕೆಶಿ ಅವರಿಗೆ ಅಸ್ಸಾಂ ಜವಾಬ್ದಾರಿ ಸಿಗುತ್ತಿದ್ದಂತೆ ಇತ್ತ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ ಕೂಡ ಎಚ್ಚೆತ್ತುಕೊಂಡಿದೆ. ಸಿದ್ದರಾಮಯ್ಯ ಅವರ ಉತ್ತರಾಧಿಕಾರಿಯಾಗಿ ಸತೀಶ್ ಜಾರಕಿಹೊಳಿ ಅವರನ್ನು ಬಿಂಬಿಸಲು ಅವರ ಬೆಂಬಲಿಗರು ಪ್ರಯತ್ನಿಸುತ್ತಿದ್ದಾರೆ. ಇದರ ಭಾಗವಾಗಿಯೇ ಸತೀಶ್ ಜಾರಕಿಹೊಳಿ ಅವರು ದೆಹಲಿಗೆ ತೆರಳಲು ಸಿದ್ಧತೆ ನಡೆಸುತ್ತಿದ್ದಾರೆ. ಇತ್ತೀಚೆಗೆ ಅವರು ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರೊಂದಿಗೆ 40 ನಿಮಿಷಗಳ ಕಾಲ ನಡೆಸಿದ ಮೀಟಿಂಗ್ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

ಸಂಕ್ರಾಂತಿಯ ಹೊತ್ತಿಗೆ ಸಿಎಂ ಬದಲಾವಣೆಯ ಸಿಹಿ ಸುದ್ದಿಯ ನಿರೀಕ್ಷೆಯಲ್ಲಿದ್ದ ಡಿಕೆಶಿ ಬೆಂಬಲಿಗರಿಗೆ ಹೈಕಮಾಂಡ್ ಭಾರಿ ಟ್ವಿಸ್ಟ್ ನೀಡಿದೆ. ಸಿದ್ದರಾಮಯ್ಯ ಅವರು ತಮ್ಮ ಸ್ಥಾನವನ್ನು ಭದ್ರಪಡಿಸಿಕೊಳ್ಳುವಲ್ಲಿ ಸದ್ಯಕ್ಕೆ ಯಶಸ್ವಿಯಾಗಿದ್ದಾರೆ. ಅತ್ತ ಅಸ್ಸಾಂ ನಲ್ಲಿ ಡಿಕೆಶಿ ಯಾವ ರೀತಿ ಕಮಾಲ್ ಮಾಡುತ್ತಾರೆ ಎಂಬುದನ್ನ ಕಾದು ನೋಡಬೇಕಿದೆ.



**ಹಾಸನ:** ಯಶ್ ಅವರ ತಾಯಿ ಪುಷ್ಪ ಅವರಿಗೆ ಸೇರಿದ್ದು ಎನ್ನಲಾ ಗುತ್ತಿರುವ ಹಾಸನ ದಲ್ಲಿರುವ ಸೈಟ್‌ನ ಕಾಂಪೌಂಡ್ ಅನ್ನು ಆ ಜಾಗದ ಸದ್ಯದ ಮಾಲೀಕರು ಎಂದು ಹೇಳಿಕೊಂಡಿರುವ ದೇವರಾಜ್ ಹೆಸರಿನ ವ್ಯಕ್ತಿಯೊಬ್ಬರು ಕೆಲ ದಿನಗಳ ಹಿಂದೆ ನೆಲಸಮಗೊಳಿಸಿದ್ದರು. ಆ ಬಗ್ಗೆ ಪುಷ್ಪ ಅವರ ಪರವಾಗಿ ಯಶ್ ಅವರ ಸಂಬಂಧಿ ದುರ್ಗಾಪ್ರಸಾದ್ ಅವರು ಹಾಸನ ಬಡಾವಣೆ ಪೊಲೀಸ್ ಠಾಣೆಯಲ್ಲಿ ಕೆಲ ದಿನಗಳ ಹಿಂದೆ ದೂರು ಸಲ್ಲಿಸಿದ್ದರು. ಇದೀಗ ಸ್ವತಃ ಪುಷ್ಪ ಅವರು ಪೊಲೀಸ್ ಠಾಣೆಗೆ ಭೇಟಿ ನೀಡಿ ಪೊಲೀಸರೊಟ್ಟಿಗೆ ಘಟನೆ ಕುರಿತಾಗಿ ಮಾತುಕತೆ ನಡೆಸಿದ್ದಾರೆ. ಹಾಸನ ನಗರದ ವಿದ್ಯಾನಗರದಲ್ಲಿರುವ ಪುಷ್ಪ ಅವರ ಮನೆಯ ಕೌಂಪೌಂಡ್ ಅನ್ನು ವ್ಯಕ್ತಿಯೊಬ್ಬರು ವಾರದ ಹಿಂದೆ ಜೆಸಿಬಿ ಬಳಸಿ ನೆಲಸಮಗೊಳಿಸಿದ್ದರು. ಕೋರ್ಟ್ ಅನುಮತಿಯ ಮೇರೆಗೆ ತಾವು ಕಾಂಪೌಂಡ್ ಅನ್ನು ತೆರವುಗೊಳಿಸಿರುವುದಾಗಿ ಅವರು ಹೇಳಿದ್ದರು. ಆದರೆ ಪುಷ್ಪ ಅವರ ಪರ ವಕೀಲರು, ವಿವಾದಿತ ಸ್ಥಳ ಪುಷ್ಪ ಅವರಿಗೇ ಸೇರಿದ್ದು, ಯಾವುದೇ ಕೋರ್ಟ್ ಅನುಮತಿ ಇಲ್ಲದೆ ಕಾಂಪೌಂಡ್ ಅನ್ನು ನೆಲಸಮ ಮಾಡಿದ್ದಾರೆ. ಇದರ ವಿರುದ್ಧ ದಾವೆ ಹೂಡಲಿದ್ದೇವೆ ಎಂದಿದ್ದರು.

ಇದೀಗ ಪೊಲೀಸ್ ಠಾಣೆಗೆ ಭೇಟಿ ನೀಡಿರುವ ಪುಷ್ಪ, ಅವರು ತಮ್ಮ ಸಂಬಂಧಿ ತಮ್ಮ ಪರವಾಗಿ ನೀಡಿದ್ದ ದೂರಿನ ಕುರಿತಾಗಿ ಪೊಲೀಸರ ಬಳಿ ಪ್ರಶ್ನೆ ಮಾಡಿದ್ದಾರೆ. ತಾವು ಮನೆಯಲ್ಲಿ ಇಲ್ಲದ ಸಮಯ ನೋಡಿಕೊಂಡು ಅಕ್ರಮವಾಗಿ ನಮ್ಮ ಸ್ಥಳದಲ್ಲಿ ಜೆಸಿಬಿ ನುಗ್ಗಿಸಿ ನಮ್ಮ ಕಾಂಪೌಂಡ್ ಅನ್ನು ನೆಲಸಮಗೊಳಿಸಿದ್ದಾರೆ. ಈ ಬಗ್ಗೆ ದೂರು ಸಹ ನೀಡಲಾಗಿದ್ದು, ದೂರಿಗೆ ತೆಗೆದುಕೊಂಡಿರುವ ಪ್ರಕ್ರಿಯೆ ಏನು ಎಂದು ಪುಷ್ಪ ಅವರು ಪೊಲೀಸರ ಬಳಿ ಪ್ರಶ್ನೆ ಮಾಡಿದ್ದಾರೆ ಎನ್ನಲಾಗಿದೆ. 1500 ಅಡಿಗಳ ಜಾಗಕ್ಕೆ ಪುಷ್ಪ ಅವರು ಕಾಂಪೌಂಡ್ ಹಾಕಿದ್ದರು. ಕಾಂಪೌಂಡ್ ಅನ್ನು ದೇವರಾಜ್ ಹೆಸರಿನ ವ್ಯಕ್ತಿ ಕೆಡವಿದ್ದಾರೆ. ದೇವರಾಜ್ ಹೇಳಿರುವಂತೆ ಸದರಿ ಸ್ಥಳ ಲಕ್ಷ್ಮಮ್ಮ ಎಂಬುವರಿಗೆ ಸೇರಿದ್ದಾಗಿದ್ದು, ಪ್ರಸ್ತುತ ಅವರು (ದೇವರಾಜ್) ಆ ಸ್ಥಳದ ಜಿಪಿಎ ಮಾಲೀಕರು ಎಂದು ಹೇಳಿದ್ದು, ನ್ಯಾಯಾಲಯದ ಆದೇಶದ ಮೇರೆಗೆ ತಾವು ಕಾಂಪೌಂಡ್ ಕೆಡವಿದ್ದಾಗಿ ಹೇಳಿಕೊಂಡಿದ್ದಾರೆ.

## ರಾಮ ಮಂದಿರದ 15 ಕಿಮೀ ವ್ಯಾಪ್ತಿಯಲ್ಲಿ ಮಾಂಸಾಹಾರ ವಿತರಣೆ ನಿಷೇಧ



**ಲಕ್ನೋ:** ಅಯೋಧ್ಯೆ ಆಡಳಿತ ಮಂಡಳಿಯು ರಾಮ ಮಂದಿರದ 15 ಕಿ.ಮೀ ವ್ಯಾಪ್ತಿಯಲ್ಲಿ ಮಾಂಸಾಹಾರ ಪದಾರ್ಥಗಳ ವಿತರಣೆಯನ್ನ ನಿಷೇಧಿಸಿದೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ಆನ್‌ಲೈನ್ ವೇದಿಕೆಗಳ ಮೂಲಕ ಪದೇ ಪದೇ ಮಾಂಸಾಹಾರ ಪದಾರ್ಥಗಳನ್ನ ಪೂರೈಕೆ ಮಾಡುತ್ತಿರುವ ಬಗ್ಗೆ ಪದೇ ಪದೇ ದೂರುಗಳು ಕೇಳಿಬಂದ ಹಿನ್ನೆಲೆ ಪಂಚಕೋಶ ಪರಿಕ್ರಮದ ಅಡಿಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ. ಅಯೋಧ್ಯೆಯಲ್ಲಿನ ಕೆಲವು ಹೋಟೆಲ್‌ಗಳು ಮತ್ತು ಹೋಂ ಸ್ಟೇಗಳು ಅತಿಥಿಗಳಿಗೆ ಮಾಂಸಾಹಾರ ಮತ್ತು ಮದ್ಯ ಪೂರೈಕೆ ಮಾಡುತ್ತಿವೆ ಎನ್ನುವ ಆರೋಪ ಕೇಳಿಬಂದಿದೆ. ಅಂತಹ ಚಟುವಟಿಕೆಗಳಿಂದ ದೂರ ಇರುವಂತೆ ಅಧಿಕಾರಿಗಳು ಸಂಸ್ಥೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ನಿರ್ಧಾರವಾದರೂ ನಿಷೇಧ ಹೇರಿಲ್ಲ!

ಅಯೋಧ್ಯೆ ಮತ್ತು ಫೈಜಾಬಾದ್ ಸಂಪರ್ಕಿಸುವ ಮಾರ್ಗವಾದ 14 ಕಿಮೀರಾಮ ಪಥದಲ್ಲಿ ಮದ್ಯ ಮತ್ತು ಮಾಂಸ ಮಾರಾಟ ನಿಷೇಧಿಸಲು ಅಯೋಧ್ಯೆ ಪುರಸಭೆ ಮೇ 2025 ರಲ್ಲಿ ನಿರ್ಧಾರ ತೆಗೆದುಕೊಂಡಿತ್ತು. ಆದ್ರೆ 9 ತಿಂಗಳೂ ಕಳೆದರೂ ಈ ಕಟ್ಟುನಿಟ್ಟಿನ ಕ್ರಮ ಜಾರಿಯಾಗಿರಲಿಲ್ಲ. ಇದರಿಂದ ಸುಮಾರು 20ಕ್ಕೂ ಹೆಚ್ಚು ಮಳಿಗೆಗಳು ಈ ಪ್ರದೇಶದಲ್ಲಿ ಮದ್ಯ ಮಾರಾಟ ಮಾಡುತ್ತಿವೆ ಎಂದು ಸ್ಥಳೀಯರು ಆಕ್ರೋಶ ಹೊರಹಾಕಿದ್ದರು. ಈ ಕುರಿತು ಪ್ರತಿಕ್ರಿಯಿಸಿದ ಆಹಾರ ಇಲಾಖೆಯ ಸಹಾಯಕ ಆಯುಕ್ತ ಮಾಣಿಕ್ ಚಂದ್ರ ಸಿಂಗ್, ಫೈಜಾಬಾದ್‌ನ ರೋಜ್ ಸೇರಿದಂತೆ ರಾಮ್ ಪಥ್ ನಾದ್ಯಂತದ ಮಾಂಸದ ಅಂಗಡಿಗಳನ್ನ ಸಿವಿಐಸಿ ಸಂಸ್ಥೆ ತೆಗೆದುಹಾಕಿದೆ.

ನಿಷೇಧದ ಹೊರತಾಗಿಯೂ ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳ ಮೂಲಕ ಪ್ರವಾಸಿಗರಿಗೆ ಮಾಂಸಾಹಾರ ಪದಾರ್ಥಗಳನ್ನ ಪೂರೈಕೆ ಮಾಡೋದು ಮುಂದುವರಿದಿದೆ ಎಂಬ ದೂರು ಕೇಳಿಬಂದಿತ್ತು. ದೂರುಗಳ ನಂತರ, ಆನ್‌ಲೈನ್‌ನಲ್ಲಿ ಮಾಂಸಾಹಾರಿ ಆಹಾರ ವಿತರಣೆಗೂ ನಿಷೇಧ ಹೇರಲಾಗಿದೆ. ಎಲ್ಲಾ ಹೋಟೆಲ್, ಮಳಿಗೆಗಳಿಗೂ ಸೂಚನೆ ನೀಡಲಾಗಿದೆ. ಕ್ರಮ ಜಾರಿಯಾಗಿರುವ ಬಗ್ಗೆ ಮತ್ತೆ ಮೇಲ್ವಿಚಾರಣೆ ನಡೆಸಲಾಗುವುದು ಎಂದು ಹೇಳಿದ್ದಾರೆ.

## ಸುಜಾತಾ ಹಂಡಿ ಹೇಳಿಕೆ ಸಂಚಲನ: ಮಹಿಳೆನಾ, ರಾಕ್ಷಸಿನಾ ಎಂಬ ಪ್ರಶ್ನೆ

**ಹುಬ್ಬಳ್ಳಿ:** ಬಿಜೆಪಿ ಮಹಿಳಾ ಕಾರ್ಯಕರ್ತೆ ಸುಜಾತಾ ಹಂಡಿ ಅವರನ್ನು ಪೊಲೀಸರು ಬಂಧಿಸಿದ ಸಂದರ್ಭದಲ್ಲಿ ವಿವಸ್ತ್ರಗೊಳಿಸಿ ಹಲ್ಲೆ ನಡೆಸಿದ ಆರೋಪದ ವಿಡಿಯೋ ವೈರಲ್ ಆದ ನಂತರ ರಾಜಕೀಯ ಗದ್ದಲ ಎದ್ದಿದೆ. ಈ ಘಟನೆಯಲ್ಲಿ ಪೊಲೀಸರು ತಪ್ಪಿತಸ್ಥರೆಂದು ಬಿಜೆಪಿ ಆರೋಪಿಸಿದ್ದರೆ, ಪೊಲೀಸರು ಮಹಿಳೆ ತಾನೇ ಬಟ್ಟೆ ಬಿಚ್ಚಿಕೊಂಡು ಡ್ರಾಮಾ ಮಾಡಿದ್ದಾಳೆಂದು ತಳ್ಳಿಹಾಕಿದ್ದಾರೆ. ಆದರೆ ಈ ವಿವಾದದ ಮಧ್ಯೆ ಸುಜಾತಾ ಹಂಡಿಯವರ ಹಳೇ ಕ್ರಿಮಿನಲ್ ಹಿನ್ನೆಲೆ ಬಯಲಾಗಿ ಟ್ವಿಸ್ಟ್ ಸಿಕ್ಕಿದೆ. ಸುಜಾತಾ ಹಂಡಿ ಅವರ ವಿರುದ್ಧ ಈ ಹಿಂದೆ ಹಲವು ಪ್ರಕರಣಗಳು ದಾಖಲಾಗಿವೆ.

ಅವುಗಳಲ್ಲಿ ಹನಿಟ್ರ್ಯಾಪ್, ಬ್ಲ್ಯಾಕ್‌ಮೇಲ್ ಮತ್ತು ಹಲ್ಲೆ ಆರೋಪಗಳು ಸೇರಿವೆ. ವಿಶೇಷವಾಗಿ ಧಾರವಾಡದ ತುಕಾರಾಮ್ ಎಂಬ ವ್ಯಕ್ತಿಗೆ ಹನಿಟ್ರ್ಯಾಪ್ ಮಾಡಿ 1.84 ಲಕ್ಷ ರೂಪಾಯಿ ವಸೂಲಿ ಮಾಡಲು ಪ್ರಯತ್ನಿಸಿದ್ದಾರೆಂದು ಆರೋಪವಿದೆ. ಈ ಸಂದರ್ಭದಲ್ಲಿ ತುಕಾರಾಮ್ ಅವರನ್ನು ಕೂಡಿ ಹಾಕಿ ನಾಲ್ಕೈದು ಯುವಕರೊಂದಿಗೆ ಸೇರಿ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆಂದು ದೂರು ದಾಖಲಾಗಿತ್ತು. ಹುಬ್ಬಳ್ಳಿ ಹೊರವಲಯದ ಜಯಾ ಫ್ಲಾಟ್ ಬಳಿ ಇರುವ ಶೆಡ್‌ನಲ್ಲಿ ಈ ಟಾರ್ಚರ್ ನಡೆದಿದ್ದು, ಮಚ್ಚು, ಪ್ಲಾಸ್ಟಿಕ್ ಹಗ್ಗ ಮತ್ತು ಬೆಲ್ಟ್‌ಗಳಿಂದ ಥಳಿಸಿದ್ದಾರೆಂದು ಆರೋಪಿಸಲಾಗಿದೆ. ಈ ಘಟನೆಯ 3 ವರ್ಷಗಳ ಹಳೇ ವಿಡಿಯೋ ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ವಿಡಿಯೋದಲ್ಲಿ ಸುಜಾತಾ ಹಂಡಿ ಅವರು ಲಾಂಗ್ ಹಿಡಿದು ಬೆದರಿಕೆ ಹಾಕುತ್ತಿರುವುದು ಮತ್ತು ಹಲ್ಲೆ ನಡೆಸುತ್ತಿರುವುದು ಕಂಡುಬರುತ್ತದೆ.

ಈ ಪ್ರಕರಣದಲ್ಲಿ ಧಾರವಾಡ ವಿದ್ಯಾಗಿರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿ ಸುಜಾತಾ ಹಂಡಿ ಮತ್ತು ಸಹಚರರನ್ನು ಬಂಧಿಸಲಾಗಿತ್ತು. ನಂತರ ಜಾಮೀನು ಪಡೆದು ಹೊರಬಂದಿದ್ದರು. ಸ್ತುತ ವಿವಾದ ಮತದಾರರ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಪೊರೇಟರ್ ಸುವರ್ಣಾ ಕಲ್ಲಕುಂಟ್ಲಾ ಅವರ ದೂರಿನ ಮೇಲೆ ಸುಜಾತಾ ಹಂಡಿಯನ್ನು ಬಂಧಿಸಲಾಗಿದೆ. ಈ ಸಂದರ್ಭದಲ್ಲಿ ವಿವಸ್ತ್ರಗೊಳಿಸಿದ ಆರೋಪಕ್ಕೆ ಪೊಲೀಸರು ತಳ್ಳಿಹಾಕಿದ್ದು, ಸುಜಾತಾ ಅವರು ಪೊಲೀಸರ ಮೇಲೆ ಹಲ್ಲೆ ಮಾಡಿ ತಾವೇ ಬಟ್ಟೆ ಬಿಚ್ಚಿಕೊಂಡಿದ್ದಾರೆಂದು ಹೇಳಿದ್ದಾರೆ.

ಒಟ್ಟಾರೆಯಾಗಿ ಸುಜಾತಾ ಹಂಡಿ ಅವರ ವಿರುದ್ಧ 9ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ ಈ ಘಟನೆ ರಾಜಕೀಯ ಬಿಸಿ ಸುದ್ದಿಯಾಗಿದ್ದು, ಬಿಜೆಪಿ ಪ್ರತಿಭಟನೆ ನಡೆಸಿದೆ. ಆದರೆ ಸುಜಾತಾ ಹಂಡಿಯವರ ಹಳೇ ಕ್ರಿಮಿನಲ್ ಚಟುವಟಿಕೆಗಳು ಬಯಲಾದ ಹಿನ್ನೆಲೆಯಲ್ಲಿ ಪ್ರಕರಣಕ್ಕೆ ಹೊಸ ಆಯಾಮ ಸಿಕ್ಕಿದೆ.

**ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ :9538786812/8217606793**

## ನಾಲ್ಕು ವರ್ಷಗಳ ಹೋರಾಟಕ್ಕೆ ಜಯ: ಆಕ್ಸಿಜನ್ ದುರಂತ ಸಂತ್ರಸ್ತರಿಗೆ ಸರ್ಕಾರಿ ಉದ್ಯೋಗ



**ಚಾಮರಾಜನಗರ:** ಜಿಲ್ಲಾಸ್ಪತ್ರೆಯಲ್ಲಿ ನಡೆದ ಆಕ್ಸಿಜನ್ ದುರಂತ ಪ್ರಕರಣದ ಸಂತ್ರಸ್ತ ಕುಟುಂಬಗಳಿಗೆ ರಾಜ್ಯ ಸರ್ಕಾರದಿಂದ ಕೊನೆಗೂ ಸಿಹಿ ಸುದ್ದಿ ಲಭಿಸಿದೆ. ಸಂತ್ರಸ್ತ ಕುಟುಂಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡಲು ಸರ್ಕಾರ ಮುಂದಾಗಿದ್ದು, ಗಣರಾಜ್ಯೋವದ ದಿನವೇ ನೇಮಕಾತಿ ಆದೇಶಗಳನ್ನು ನೀಡಲಾಗುವುದು ಎಂದು ಹೇಳಲಾಗಿದೆ.

**ಗಣರಾಜ್ಯೋತ್ಸವದಂದೇ ನೇಮಕಾತಿ**

2021ರ ಮೇ 3ರಂದು ಆಕ್ಸಿಜನ್ ಕೊರತೆಯಿಂದ ಕೋವಿಡ್ ಸೋಂಕಿತ 36 ರೋಗಿಗಳು ಮೃತಪಟ್ಟಿದ್ದ ಈ ದುರಂತ ಪ್ರಕರಣಕ್ಕೆ ಸಂಬಂಧಿಸಿ, ಸಂತ್ರಸ್ತ ಕುಟುಂಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡಲು ಸರ್ಕಾರ ನಿರ್ಧರಿಸಿದೆ. ಈ ಸಂಬಂಧ ಜನವರಿ 26ರಂದು ನಡೆಯುವ ಗಣರಾಜ್ಯೋತ್ಸವದ ದಿನವೇ ನೇಮಕಾತಿ ಆದೇಶಗಳನ್ನು ವಿತರಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಚಾಮರಾಜನಗರದಲ್ಲಿ ತಿಳಿಸಿದ್ದಾರೆ.

**ಸಂತ್ರಸ್ತರಿಗೆ ನೀಡಿದ ಭರವಸೆ ಈಡೇರಿಸಿದ ಕಾಂಗ್ರೆಸ್**

ಸತತ ನಾಲ್ಕು ವರ್ಷಗಳ ಕಾಲ ಸುದೀರ್ಘ ಹೋರಾಟ ನಡೆಸಿದ ಸಂತ್ರಸ್ತ ಕುಟುಂಬಗಳಿಗೆ ಇದೀಗ ನ್ಯಾಯ ಸಿಕ್ಕಂತಾಗಿದೆ. ಕೋವಿಡ್ ಮಹಾಮಾರಿ ಕಾಲದಲ್ಲಿ ನಡೆದ ಈ ದುರ್ಘಟನೆಯು ರಾಜ್ಯಾದ್ಯಂತ ಭಾರೀ ಆಕ್ರೋಶಕ್ಕೆ ಕಾರಣವಾಗಿತ್ತು. ಜಿಲ್ಲಾಸ್ಪತ್ರೆಯಲ್ಲಿ ಅಗತ್ಯ ಆಕ್ಸಿಜನ್ ಸರಬರಾಜು ಕೊರತೆಯಿಂದ 36 ರೋಗಿಗಳು ಪ್ರಾಣ ಕಳೆದುಕೊಂಡಿದ್ದರು.

ಅಂದು ವಿಪಕ್ಷ ಸ್ಥಾನದಲ್ಲಿದ್ದ ಕಾಂಗ್ರೆಸ್ ಪಕ್ಷವು ಸಂತ್ರಸ್ತ ಕುಟುಂಬಗಳಿಗೆ ನೆರವು ನೀಡುವ ಭರವಸೆ ನೀಡಿತ್ತು. ವಿಶೇಷವಾಗಿ, ಸಂತ್ರಸ್ತರ ಕುಟುಂಬ ಸದಸ್ಯರಿಗೆ ಉದ್ಯೋಗ ನೀಡುವುದಾಗಿ ಭರವಸೆ ನೀಡಲಾಗಿತ್ತು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಭಾರತ್ ಜೋಡೋ ಯಾತ್ರೆ ವೇಳೆ ಕೂಡ, ಪಕ್ಷ ಅಧಿಕಾರಕ್ಕೆ ಬಂದರೆ ಸಂತ್ರಸ್ತ ಕುಟುಂಬಗಳಿಗೆ ಸರ್ಕಾರಿ ಉದ್ಯೋಗ ನೀಡಲಾಗುವುದು ಎಂದು ಘೋಷಿಸಿದ್ದರು. ಈಗ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುವ ಹಿನ್ನೆಲೆಯಲ್ಲಿ, ನೀಡಿದ್ದ ಭರವಸೆಯನ್ನು ಈಡೇರಿಸುವ ಮೂಲಕ ಸಂತ್ರಸ್ತ ಕುಟುಂಬಗಳಿಗೆ ಆಶಾಕಿರಣ ಮೂಡಿಸಿದೆ.



**ಲಕ್ನೋ:** ಬಿಜೆಪಿ ಸರ್ಕಾರ ಉತ್ತರ ಪ್ರದೇಶದ ಕಾನೂನು ಸುವ್ಯವಸ್ಥೆಯನ್ನು ಸಂಪೂರ್ಣವಾಗಿ ಹಾಳು ಮಾಡಿದೆ. ಮಹಿಳೆಯರ ವಿರುದ್ಧದ ಅಪರಾಧಗಳು, ಸೈಬರ್ ಕ್ರೈಂಗಳು ಮತ್ತು ಭ್ರಷ್ಟಾಚಾರಗಳು ರಾಜ್ಯದಾದ್ಯಂತ ತೀವ್ರವಾಗಿ ಹೆಚ್ಚಾಗಿವೆ. ಈ ಸರ್ಕಾರದ ಅಡಿಯಲ್ಲಿ ಜನರ ಸುರಕ್ಷತೆಗೆ ಯಾವುದೇ ಭರವಸೆ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಅಖಿಲೇಶ್ ಯಾದವ್ ಆರೋಪಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ 'ಜೀರೋ ಟಾಲರೆನ್ಸ್' ನೀತಿ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಆರೋಪಿಸಿದರು. ಪ್ರತಿದಿನ ಐದು ಮಹಿಳೆಯರು ಹಿಂಸಾಚಾರಕ್ಕೆ ಬಲಿಯಾಗುತ್ತಿದ್ದಾರೆ.

ಪ್ರತಿ 15 ದಿನಗಳಿಗೊಮ್ಮೆ ಅತ್ಯಾಚಾರದ ನಾಚಿಕೆಗೇಡಿನ ಘಟನೆಗಳು ಸಂಭವಿಸುತ್ತವೆ. ಮಹಿಳೆಯರ ಸುರಕ್ಷತೆಯ ಬಗ್ಗೆ ಸುಳ್ಳು ಹೇಳಿಕೆಗಳನ್ನು ನೀಡುವ ಮುಖ್ಯಮಂತ್ರಿಯನ್ನು 2027 ರಲ್ಲಿ ರಾಜ್ಯದ ಜನರು ಅಧಿಕಾರದಿಂದ ಹೊರಹಾಕುತ್ತಾರೆ ಎಂದು ತಿಳಿಸಿದ್ದಾರೆ. ಉತ್ತರ ಪ್ರದೇಶದಲ್ಲಿ ನಡೆದ ಎಸ್‌ಐಆರ್ ಬಗ್ಗೆ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯನ್ನು ಯಾವ ಪಕ್ಷವೂ ವಿರೋಧಿಸಿಲ್ಲ. ಪ್ರಮುಖ ಸಮಾಜದ ವೋಟ್‌ಗಳನ್ನು ಕಡಿಮೆ ಮಾಡಿ, ತಮ್ಮ ವೋಟ್‌ಗಳನ್ನು ಹೆಚ್ಚಿಸುವ ಸಂಚು ನಡೆಯುತ್ತಿದೆ. ಈ ಸಂಚನ್ನು ತಡೆಯಲು ವೋಟರ್ ಐಡಿಯನ್ನು ಆಧಾರ್ ಕಾರ್ಡ್‌ಗೆ ಲಿಂಕ್ ಮಾಡಬೇಕು. ವೋಟ್‌ಗಳನ್ನು ಆಧಾರ್‌ಗೆ ಜೋಡಿಸಿದರೆ ಮಾತ್ರ ವೋಟ್ ಮೋಸವನ್ನು ತಪ್ಪಿಸಬಹುದು. ಇದು ಪಿಡಿಎ ಸಮಾಜದ ಹಕ್ಕುಗಳನ್ನು ರಕ್ಷಿಸುತ್ತದೆ ಮತ್ತು ಚುನಾವಣಾ ಪ್ರಕ್ರಿಯೆಯನ್ನು ಪಾರದರ್ಶಕಗೊಳಿಸುತ್ತದೆ ಎಂದು ಹೇಳಿದರು.

ಮತದಾರರ ಪಟ್ಟಿ ಇನ್ನೂ ಬಿಡುಗಡೆಯಾಗದೇ ಇದ್ದಾಗ, ಎಷ್ಟು ಮತಗಳು ಅಳಿಸಿಹೋಗುತ್ತವೆ ಎಂದು ಯಾರಿಗೂ ತಿಳಿದಿರದಿದ್ದಾಗ, ಮುಖ್ಯಮಂತ್ರಿಗಳು ತಮ್ಮ ನಾಯಕರಿಗೆ, ಕಾರ್ಯಕರ್ತರಿಗೆ ಮತ್ತು ಅಧಿಕಾರಿಗಳಿಗೆ ಸುಮಾರು ನಾಲ್ಕು ಕೋಟಿ ಮತಗಳು ಅಳಿಸಿಹೋಗುತ್ತವೆ ಎಂದು ಹೇಳುತ್ತಾರೆ. ಈ ಹೇಳಿಕೆಗೆ ದಾಖಲೆ ಎಲ್ಲಿದೆ? ಈ ಅಂಕಿ ಅಂಶವನ್ನು ಈಗಾಗಲೇ ನಿರ್ಧರಿಸಿದಾಗ, ಈ ಸಂಪೂರ್ಣ ಪ್ರಕ್ರಿಯೆಯು ಎಷ್ಟು ನ್ಯಾಯಯುತವಾಗಿದೆ ಎಂದು ಅಖಿಲೇಶ್ ಯಾದವ್ ಪ್ರಶ್ನಿಸಿದ್ದಾರೆ.

## ರಕ್ಷಣಾ ಮುಖ್ಯಸ್ಥ ವಾಗ್ದಾಳಿ: ಆಪರೇಷನ್ ಸಿಂಧೂರದಿಂದ ಪಾಕಿಸ್ತಾನ ಸಂವಿಧಾನವೇ ಬದಲಾಗಿದೆ

**ನವದೆಹಲಿ:** ಭಾರತದ ರಕ್ಷಣಾ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಪಾಕಿಸ್ತಾನ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಪಾಕಿಸ್ತಾನದ ಇತ್ತೀಚಿನ ಸಾಂವಿಧಾನಿಕ ತಿದ್ದುಪಡಿಗಳು ಆಪರೇಷನ್ ಸಿಂಧೂರ್ ಸಮಯದಲ್ಲಿ ಅದರ ವೈಫಲ್ಯವನ್ನು ಪ್ರದರ್ಶಿಸುತ್ತವೆ ಎಂದು ಹೇಳಿಟೀಕಿಸಿದ್ದಾರೆ. ಪಾಕಿಸ್ತಾನ ತನ್ನ ನ್ಯೂನತೆಗಳನ್ನು ಮರೆಮಾಡಲು ಬದಲಾವಣೆಗಳನ್ನು ಆರಂಭಿಸಿತು. ಇವು ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ಸಮಯದಲ್ಲಿ ಬಹಿರಂಗಗೊಂಡವು ಎಂದು ಅವರು ಹೇಳಿದ್ದಾರೆ.

ಪುಣೆ ಸಾರ್ವಜನಿಕ ನೀತಿ ಉತ್ಸವದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಜನರಲ್ ಚೌಹಾಣ್, ಪಾಕಿಸ್ತಾನದಲ್ಲಿ ಮಾಡಲಾದ ಬದಲಾವಣೆಗಳು ಅನೇಕ ನ್ಯೂನತೆಗಳನ್ನು ಬಹಿರಂಗಪಡಿಸಿವೆ ಎಂದು ಹೇಳಿದ್ದಾರೆ. ಆತುರದಿಂದ ಮಾಡಿದ ಸಾಂವಿಧಾನಿಕ ತಿದ್ದುಪಡಿ ಸೇರಿದಂತೆ ಪಾಕಿಸ್ತಾನದಲ್ಲಿ ತರಲಾದ ಬದಲಾವಣೆಗಳು ವಾಸ್ತವವಾಗಿ ಈ ಕಾರ್ಯಾಚರಣೆಯಲ್ಲಿ ಅವರು ಅಂದುಕೊಂಡಿದ್ದು ಆಗಲಿಲ್ಲ ಎಂಬುದನ್ನು ಸಾರುತ್ತದೆ ಎಂದಿದ್ದಾರೆ. ಪಾಕಿಸ್ತಾನದ ಸಂವಿಧಾನದ 243ನೇ ವಿಧಿಗೆ ತಿದ್ದುಪಡಿ ಮಾಡುವ ಮೂಲಕ ದೇಶದ ಉನ್ನತ ರಕ್ಷಣಾ ಸಂಸ್ಥೆಯಲ್ಲಿ ಭಾರೀ ಬದಲಾವಣೆಗಳಾಗಿವೆ. 3 ಸೇವೆಗಳ ನಡುವೆ ಜಂಟಿ ಮುಖ್ಯಸ್ಥರ ಹುದ್ದೆಯನ್ನು ರದ್ದುಗೊಳಿಸಲಾಗಿದೆ ಎಂದು ಜನರಲ್ ಚೌಹಾಣ್ ವಿವರಿಸಿದ್ದಾರೆ. ಇತ್ತೀಚಿನ ಕಾರ್ಯಾಚರಣೆಗಳಿಂದ ಕಲಿತ ಪಾಠಗಳಿಂದ ಭಾರತದ ರಕ್ಷಣಾ ಯೋಜನೆ ಮತ್ತು ಉನ್ನತ ಕಮಾಂಡ್ ರಚನೆಗಳನ್ನು ಮಾರ್ಪಡಿಸಲಾಗಿದೆ. ಭಾರತವು ದೀರ್ಘಕಾಲೀನ ಮಿಲಿಟರಿ ಸಿದ್ಧತೆ ಮತ್ತು ಹೊಂದಾಣಿಕೆಯ ಕಾರ್ಯತಂತ್ರದ ಯೋಜನೆಯ ಮೇಲೆ ಕೇಂದ್ರೀಕರಿಸುತ್ತಿದೆ ಎಂದು ಜನರಲ್ ಚೌಹಾಣ್ ಹೇಳಿದ್ದಾರೆ.

## ನೀರಾವರಿ ಯೋಜನೆ ಸ್ಥಗಿತ ಭೀತಿ: ಭದ್ರಾ ಮೇಲ್ದಂಡೆಗೆ 5,300 ಕೋಟಿ ಬಿಡುಗಡೆಗೆ ಒತ್ತಾಯ

**ನವದೆಹಲಿ:** ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ.ಗಳನ್ನ ಕೇಂದ್ರ ಸರ್ಕಾರ ಘೋಷಿಸಿದೆ. ಈವರೆಗೂ ಕೇಂದ್ರ ಸರ್ಕಾರ ಒಂದು ರೂಪಾಯಿ ಬಿಡುಗಡೆ ಮಾಡಿಲ್ಲ, ಕೇಂದ್ರ ಹಣಕಾಸು ಆಯೋಗ ಘೋಷಿಸಿದ 11,495 ಕೋಟಿ ರೂ. ಅನುದಾನ ಬಿಡುಗಡೆ ಆಗಿಲ್ಲ ಈ ಬಾರಿಯ ಬಜೆಟ್‌ನಲ್ಲಾದ್ರೂ

ರಾಜ್ಯಕ್ಕೆ ಅನುದಾನ ಬಿಡುಗಡೆ ಮಾಡಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಒತ್ತಾಯಿಸಿದ್ದಾರೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೇತೃತ್ವದಲ್ಲಿ ನಡೆದ ಕೇಂದ್ರ ಬಜೆಟ್ ಪೂರ್ವ ತಯಾರಿ ಸಭೆಯಲ್ಲಿ ಭಾಗಿಯಾದ ಅವರು, ರಾಜ್ಯದ ಬೇಡಿಕೆಗಳ ಬಗ್ಗೆ ಕೇಂದ್ರ ಸರ್ಕಾರದ ಗಮನ ಸೆಳೆದರು. ಕಲ್ಯಾಣ ಕರ್ನಾಟಕ ಅಭಿವೃದ್ದಿಗೆ ರಾಜ್ಯ ಸರ್ಕಾರ ನೀಡುತ್ತಿರುವ ಅನುದಾನಕ್ಕೆ ಸಮನಾಗಿ ಅನುದಾನ ನೀಡಬೇಕು ಮಲೆನಾಡು ಕರಾವಳಿ ಭಾಗದ ಅಭಿವೃದ್ಧಿಗೆ ಹಾಗೂ ಬೆಂಗಳೂರು ಅಭಿವೃದ್ಧಿಗೆ ವಿಶೇಷ ಅನುದಾನ ನೀಡಬೇಕು.



ಆಶಾ, ಅಂಗನವಾಡಿ ಕಾರ್ಯಕರ್ತೆಯರಿಗೆ ಗೌರವಧನ ಪರಿಷ್ಕರಣೆ ಮಾಡಬೇಕು, 12 ವರ್ಷದಿಂದ ವೃದ್ಧರಿಗೆ, ವಿಧವೆಯರಿಗೆ ಪಿಂಚಣಿ ಏರಿಕೆಯಾಗಿಲ್ಲ, ಅದು ಏರಿಕೆಯಾಗಬೇಕು. ವಸತಿ ಯೋಜನೆಗಳಿಗೆ ಕೇಂದ್ರ ಸರ್ಕಾರ ಸಹಾಯಧನ ಹೆಚ್ಚಳ ಮಾಡಬೇಕು ಎಂದು ಮನವಿ ಮಾಡಿದರು. ರಾಜ್ಯದ ಬೇಡಿಕೆ ಬಗ್ಗೆ ಮಾತನಾಡಿದ ಕೃಷ್ಣ ಬೈರೇಗೌಡ ಅವರು, ಹಿಂದೆ ಮಾಡಿದ ಮನವಿಗಳನ್ನು ಕೇಂದ್ರ ಸರ್ಕಾರ ತಿರಸ್ಕರಿಸಿದೆ. ಈಗಲೂ ಅದನ್ನೇ ಮಾಡಬಹುದು, ಆದಾಗ್ಯೂ ನಾವು ನಿರಂತರ ಮನವಿ ಮಾಡುತ್ತಿದ್ದೇವೆ ಎಂದರು.

ದಾಖಲಾತಿ ಪರಿಶೀಲನೆಗೆ ಸಮಯ ಬೇಕು ಕೋಗಿಲು ಮನೆ ಸಂತ್ರಸ್ತರಿಗೆ ಮನೆ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾತನಾಡಿದ ಕೃಷ್ಣ ಬೈರೇಗೌಡ, ಮನೆ ಕಳೆದುಕೊಂಡವರ ದಾಖಲಾತಿ ಪರಿಶೀಲನೆ ಆಗಬೇಕು, ಪರಿಶೀಲನೆ ಆಗದೇ ಮನೆ ನೀಡಲು ಸಾಧ್ಯವಿಲ್ಲ ಅಧಿಕಾರಿಗಳು ದಾಖಲಾತಿ ಪರಿಶೀಲನೆ ಮಾಡುತ್ತಿದ್ದಾರೆ. ಅವರ ಮೇಲೆ ಒತ್ತಡ ಹಾಕುವುದು ಸೂಕ್ತವಲ್ಲ, ಬಲವಂತ ಮಾಡಿ ಬೇಗ ಮಾಡಲು ಹೇಳಲು ಆಗುವುದಿಲ್ಲ. ಎಷ್ಟು ವರ್ಷದಿಂದ ವಾಸ ಇದ್ದಾರೆ ಎಲ್ಲ ಮಾಹಿತಿ ಸಿಗಬೇಕು ಪರಿಶೀಲನೆ ಸ್ವಲ್ಪ ಸಮಯ ತೆಗೆದುಕೊಳ್ಳುತ್ತಿದೆ, ಬೇಗ ಮಾಡಬೇಕು ಎನ್ನುವುದು ನಮ್ಮದು ಆಶಯ ಎಂದು ಹೇಳಿದರು. ಹಿಂದೆ ಯಶವಂತಪುರ, ಆರ್‌ಆರ್ ನಗರದಲ್ಲಿ ಇದೇ ರೀತಿ ಮಾನವೀಯತೆ ಆಧಾರದ ಮೇಲೆ ಮನೆ ನೀಡಿದೆ ಅದರ ಆಧಾರದ ಮೇಲೆ ನಾವು ಮನೆ ನೀಡುತ್ತಿದ್ದೇವೆ ಕ್ಯೂನಲ್ಲಿರುವ ಇತರೆ ಜನರಿಗೂ ಮನೆ ನೀಡುತ್ತೇವೆ. 50-100 ಮನೆ ಮಾನವೀಯತೆ ಮೇಲೆ ನೀಡಿದರೆ ಇತರೆ ಜನರಿಗೆ ತೊಂದರೆಯಾಗದು ಎಂದು ಹೇಳಿದರು.

**ಕಾನೂನು ಹೋರಾಟ ಪರಿಶೀಲನೆ**

ಕೇರಳದಲ್ಲಿ ಮಲಯಾಳಂ ಕಡ್ಡಾಯ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಕೇರಳ ಸಿಎಂ ಜೊತೆಗೆ ಸಿಎಂ ಸಿದ್ದರಾಮಯ್ಯ ಮಾತನಾಡಿದ್ದಾರೆ, ಕನ್ನಡ ಭಾಷಿಕರ ಹಿತ ಕಾಯುವ ಕೆಲಸ ಮಾಡುತ್ತಿದ್ದೇವೆ. ಕಾಸರಗೂಡು ಕೇರಳದಲ್ಲಿದ್ದರು ಭಾವನಾತ್ಮಕವಾಗಿ ಕರ್ನಾಟಕಕ್ಕೆ ಸೇರಿದೆ ಇಲ್ಲಿ ತನಕ ಕೇರಳ ಕನ್ನಡಿಗರು ಶಾಂತಿಯುತವಾಗಿ ಬಂದಿದ್ದಾರೆ ಕಾನೂನು ಹೋರಾಟದ ಬಗ್ಗೆಯೂ ಪರಿಶೀಲನೆಗಳು ನಡೆಯುತ್ತಿದೆ ಎಂದರು. ಬಿಜೆಪಿ ನಾಯಕರ ನೈತಿಕ ದಿವಾಳಿತನ ಮನರೇಗಾ ದೇಶದಲ್ಲಿ ಬಡವರಿಗೆ ಆಸರೆಯಾಗಿತ್ತು ಜೀವನಕ್ಕೆ ಭದ್ರತೆ ನೀಡಿತ್ತು, ಕನಿಷ್ಠ ಮನರೇಗಾ ಮೂಲಕ ಜನರು ಜೀವನ ಮಾಡುತ್ತಿದ್ದರು ಕೇಂದ್ರ ಸರ್ಕಾರ ಉದ್ಯೋಗದ ಹಕ್ಕನ್ನು ಕಿತ್ತುಕೊಂಡಿದೆ ಬಡವರನ್ನ ಬಡವರಾಗಿ ಉಳಿಸುವ ಯತ್ನ ಇದು.

ಶ್ರೀಮಂತರಿಗೆ ಅನುಕೂಲ ಮಾಡಿಕೊಡುತ್ತಿದೆ ರಾಜ್ಯ ಸರ್ಕಾರ, ಒಕ್ಕೂಟ ವ್ಯವಸ್ಥೆಯ ಸ್ವಾಯತ್ತತೆ ಮೇಲೆ ಪ್ರಹಾರ ಮಾಡುತ್ತಿದೆ ಇದರಿಂದ ಎಲ್ಲ ರಾಜ್ಯಗಳಲ್ಲೂ ಹಣಕಾಸು ವ್ಯವಸ್ಥೆ ಬಿಗಡಾಯಿಸುತ್ತಿದೆ ಯೋಜನೆ ಕಾನೂನು ರಾಜ್ಯದ ಆರ್ಥಿಕ ಸ್ಥಿತಿಗೆ ಹೊರಯಾಗಲಿದೆ ಇದನ್ನು ರಾಜ್ಯ ಬಿಜೆಪಿ ನಾಯಕರು ಖಂಡಿಬೇಕಿತ್ತು ಇದನ್ನು ಬೆಂಬಲಿಸುವ ರೀತಿ ಅವರ ನೈತಿಕ ದಿವಾಳಿ ತೋರಿಸುತ್ತಿದೆ ಎಂದರು.

## ಪ್ರೀತಿ ತಿರಸ್ಕರಿಸಿದ್ದಕ್ಕೆ ಹತ್ಯೆ: ಶಸ್ತ್ರಧಾರಿ ಆರೋಪಿಯ ಬಂಧನ

**ನೆಲಮಂಗಲ:** ಪ್ರೀತಿ ತಿರಸ್ಕರಿಸಿದ ಯುವತಿ ಹತ್ಯೆಗೆ ಸ್ಕೆಚ್ ಹಾಕಿ ಹಾಡಹಗಲೇ ಗನ್ ಹಿಡಿದು ಓಡಾಡಿದ ಯುವಕನನ್ನು ನೆಲಮಂಗಲ ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ಬಿಹಾರ ಮೂಲದ ಶುಭಂ ಎಂದು ಗುರುತಿಸಲಾಗಿದೆ. ಪಿಜ್ಜಾ ಡಿಲೆವರಿ ಬಾಯ್ ಆಗಿದ್ದ ಆರೋಪಿ, ಮೂರು ವರ್ಷದಿಂದ ಪ್ರೀತಿಸುವಂತೆ ನರ್ಸಿಂಗ್ ವಿದ್ಯಾರ್ಥಿನಿಯೊಬ್ಬಳ ಹಿಂದೆ ಬಿದ್ದಿದ್ದ. ಆದರೆ ಯುವತಿ ಆತನ ಪ್ರೀತಿ ನಿರಾಕರಿಸಿದ್ದಳು ಆಕೆ ಬೇರೆಯವನನ್ನ ಪ್ರೀತಿ ಮಾಡ್ತಿದ್ದಾಳೆ ಎಂದುಕೊಂಡಿದ್ದ ಆರೋಪಿ, ಆನ್‌ಲೈನ್‌ನಲ್ಲಿ ಗನ್ ಖರೀದಿಸಿ, ಕೊಲೆಗೆ ಮುಂದಾಗಿದ್ದ. ಆತ ಗನ್ ಹಿಡಿದು ಮಲ್ಲಾಪುರ ಗ್ರಾಮದ ರಸ್ತೆಯಲ್ಲಿ ಓಡಾಡಿದ್ದು ಸಿಸಿ ಟಿವಿಯಲ್ಲಿ ಸೆರೆಯಾಗಿದೆ. ಯುವತಿ ಕಾಲೇಜ್‌ಗೆ ಹಾಲ್ ಟಿಕೆಟ್ ಪಡೆಯಲು ಊಬರ್‌ನಲ್ಲಿ ಬಂದಿದ್ದಳು. ಈ ವೇಳೆ ಊಬರ್ ಡ್ರೈವರ್‌ಗೆ ಯುವತಿ, ಶುಭಂ ಬಗ್ಗೆ ಹೇಳಿದ್ದಾಳೆ. ಊಬರ್ ಚಾಲಕ ಶಿವಕುಮಾರ್ 112ಕ್ಕೆ ಕರೆ ಮಾಡಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಪೊಲೀಸರು ಸ್ಥಳಕ್ಕೆ ತೆರಳಿ ಆತನನ್ನು ಬಂಧಿಸಿದ್ದಾರೆ. ಆರೋಪಿ ಬಳಿಯಿದ್ದ ಕಂಟ್ರಿಮೇಡ್ ರಿವಾಲ್ವರ್ ಹಾಗೂ ನಾಲ್ಕು ಜೀವಂತ ಗುಂಡನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ

## ಕುಡಿದು ಸಿನಿಮಾ ಸ್ಟೈಲ್‌ಲ್ಲಿ ಡಿವೈಡರ್ ಹಾರಿಸಿದ ಕಾರು ಚಾಲಕ 8 ಮಂದಿ ಜಸ್ಟ್ ಮಿಸ್



**ಬೆಂಗಳೂರು:** ಕುಡಿದ ಮತ್ತಲ್ಲಿ ಕಾರು ಚಾಲಕ ಅಡ್ಡದಿಡ್ಡಿ ಕಾರು ಚಲಾಯಿಸಿ ಡಿವೈಡರ್ ಮೇಲಿಂದ ಹಾರಿಸಿದ ಘಟನೆ ಇಂದಿರಾನಗರದ 18ನೇ ಮುಖ್ಯರಸ್ತೆಯಲ್ಲಿ ನಡೆದಿದೆ. ಅದೃಷ್ಟವಶಾತ್ ಅಲ್ಲೇ ನಿಂತಿದ್ದ ಯುವಕ, ಯುವತಿಯರ ಗುಂಪು ಹಾಗೂ ಇಬ್ಬರು ಬೈಕ್ ಸವಾರರು ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಹೋಟೆಲ್‌ನಲ್ಲಿ ಊಟ ಮುಗಿಸಿ ಆರು ಮಂದಿ ಹೊರಗೆ ನಿಂತಿದ್ದರು. ಈ ವೇಳೆ ಕಾರು ವೇಗವಾಗಿ ಬಂದು ಡಿವೈಡರ್‌ಗೆ ಡಿಕ್ಕಿ ಹೊಡೆದು ಹೊಟೆಲ್‌ಗೆ ಗುದ್ದಿದೆ. ಜೋರಾದ ಸದ್ದು ಕೇಳುತ್ತಿದ್ದಂತೆ ಯುವಕರು ಪಕ್ಕಕ್ಕೆ ಸರಿದಿದ್ದಾರೆ.

ಇದೇ ವೇಳೆ ಇಬ್ಬರು ಬೈಕ್ ಸವಾರರು ಸಹ ರಸ್ತೆಯಲ್ಲಿ ಸಾಗಿದ್ದು, ಕೂದಲೆಳೆ ಅಂತರದಲ್ಲಿ ಅಪಾಯದಿಂದ ಪಾರಾಗಿದ್ದಾರೆ. ಈ ಸಿನಿಮಾ ಶೈಲಿಯ ಭೀಕರ ಅಪಘಾತದ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ವೈರಲ್ ಆಗಿದೆ. ಸ್ವಲ್ಪ ಹೆಚ್ಚು ಕಡಿಮೆಯಾಗಿದ್ದರೂ ಇಬ್ಬರು ಬೈಕ್ ಸವಾರು, ರಸ್ತೆ ಬದಿ ನಿಂತಿದ್ದ ಆರು ಮಂದಿಯೂ ಬಲಿಯಾಗುತ್ತಿದ್ದರು. ಅದೃಷ್ಟವಶಾತ್ ದೊಡ್ಡ ದುರಂತ ಕೂದಲೆಳೆ ಅಂತರದಲ್ಲಿ ತಪ್ಪಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.